ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 Issue: 235 ₹ ಬೆಲೆ: 4 Friday, 10, November,2023 newsbelagavi@gmail.com 9900332089 Regn,No:G-2/PMG/KA/NK/BM/139/2021-23

ಇಂದು ತೆಲಂಗಾಣ ಚುನಾವಣಾ ಅಖಾಡದಲ್ಲಿ ಸಿದ್ದರಾಮಯ್ಯ ಮತ ಬೇಟೆ

ಬೆಂಗಳೂರು: ತೆಲಂಗಾಣದಲ್ಲಿ ವಿಧಾನಸಭೆ ಚುನಾವಣೆಯ ಕಾವು ದಿನ ದಿನ ಹೆಚ್ಚುತ್ತಲೇ ಇದೆ. ತೆಲಂಗಾಣದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ತರಲು ರಾಜ್ಯದ ಕೈ ನಾಯಕರು ಸತತ ಪ್ರವಾಸ ಕೈಗೊಳ್ಳುತ್ತಿದ್ದು, ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಉಸ್ತುವಾರಿಯಲ್ಲಿ ಕಾಂಗ್ರೆಸ್ ಚುನಾವಣೆ ಎದುರಿಸುತ್ತಿದೆ.

ಈ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ ತೆಲಂಗಾಣದಲ್ಲಿ ಪ್ರಚಾರಕ್ಕೆಂದು ತೆರಳುತ್ತಿದ್ದಾರೆ. ನಾಳೆ ಬೆಂಗಳೂರಿನಿಂದ ಹೈದರಾಬಾದ್ ತೆರಳಲಿರುವ ಸಿಎಂ ಸಿದ್ದರಾಮಯ್ಯ ಚುನಾವಣಾ ಪ್ರಚಾರದಲ್ಲಿ ಭಾಗಿಯಾಗಿ ಕಾಂಗ್ರೆಸ್ ಪರ ಮತಯಾಚಿಸಲಿದ್ದಾರೆ.

ಇಂದು ಇಡೀ ದಿನ ತೆಲಂಗಾಣದಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಪರ ಪ್ರಚಾರ ನಡಸಲಿದ್ದಾರೆ. ಇದಕ್ಕೂ ಮೊದಲು ಡಿ.ಕೆ ಶಿವಕುಮಾರ್ ಸೇರಿ ನಾಲ್ವರು ರಾಜ್ಯ ನಾಯಕರು ತೆಲಂಗಾಣದಲ್ಲಿ ಪರವಾಸ ಕೈಗೊಂಡಿದ್ದರು. ಜೊತೆಗೆ ತೆಲಂಗಾಣದಲ್ಲೂ ಕಾಂಗ್ರೆಸ್ ಅನ್ನು ಅಧಿಕಾರಕ್ಕೆ ತರುವುದಾಗಿ ಭರವಸೆ ನೀಡಿದ್ದರು.

ತೆಲಂಗಾಣದಲ್ಲಿ ಕಾಂಗ್ರೆಸ್ ಮತದಾರರ ಸೆಳೆಯಲು ರಾಜ್ಯದಂತೆ ಗ್ಯಾರಂಟಿ ಯೋಜನೆಗಳ ಘೋಷಿಸಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ 6 ಗ್ಯಾರಂಟಿಗಳ ಜಾರಿಗೆ ತರುವುದಾಗಿ ಘೋಷಿಸಿದೆ. ಮಹಾಲಕ್ಷ್ಮಿ, ರೈತ ಭರೋಸಾ, ಗೃಹಜ್ಯೋತಿ, ಇಂದಿರಮ್ಮ ಮನೆ, ಯುವ ವಿಕಾಸಂ ಎಂಬ ಗ್ಯಾರಂಟಿಗಳನ್ನು ಜನರ ಮುಂದಿಟ್ಟು ಚುನಾವಣೆ ಎದುರಿಸುತ್ತಿದೆ.

ಗುತ್ತಿಗೆದಾರರ ಬಿಲ್ ಇತ್ಯರ್ಥಕ್ಕೆ ಶೇ.8 ರಷ್ಟು ಕಮಿಷನ್: ಯಡಿಯೂರಪ್ಪ

ಬೆಂಗಳೂರು: ರಾಜ್ಯ ಸರ್ಕಾರದ ವಿರುದ್ಧ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ, ರಾಜ್ಯ ಸರ್ಕಾರದ ವಿರುದ್ಧ ಬಿಲ್ ಇತ್ಯರ್ಥಕ್ಕೆ ಗುತ್ತಿಗೆದಾರರ ಬಳಿ ಶೇ.8 ರಷ್ಟು ಕಮಿಷನ್ ಕೇಳುತ್ತಿರುವ ಆರೋಪ ಮಾಡಿದ್ದಾರೆ.

ರಾಜ್ಯ ಕಾಂಗ್ರೆಸ್ ಸರ್ಕಾರದ ಕಾರ್ಯನಿರ್ವಹಣೆ ಶೈಲಿ ಹಾಗೂ ನೀತಿಗಳ ವಿರುದ್ಧ ನಗರದಲ್ಲಿ ಮೂರು ದಿನಗಳ ಪ್ರತಿಭಟನೆಯನ್ನು ನಡೆಸಲಾಗುವುದು ಎಂದು ಯಡಿಯೂರಪ್ಪ ಇಸ್ಟೇ ವೇಳೆ ತಿಳಿಸಿದ್ದಾರೆ.

ಗುತ್ತಿಗೆದಾರರಿಗೆ ಸರಿಯಾದ ಸಮಯಕ್ಕೆ ಬಿಲ್ ಪಾವತಿಯಾಗದ ಪರಿಣಾಮ ಇಂದು ರಾಜ್ಯದಲ್ಲಿ ಅಭಿವೃದ್ಧಿ ಕೆಲಸಗಳನ್ನು ಕೈಗೆತ್ತಿಕೊಳ್ಳುವುದಕ್ಕೆ ಮುಂದಾಗುತ್ತಿಲ್ಲ ಎಂದು ಮಾಜಿ ಸಿಎಂ ಆರೋಪಿಸಿದ್ದಾರೆ.

ಬಿಲ್ ಗಳನ್ನು ಇತ್ಯರ್ಥಗೊಳಿಸುವುದಕ್ಕಾಗಿ ಗುತ್ತಿಗೆದಾರರಿಂದ ಈ ಸರ್ಕಾರ ಶೇ.7.5–8 ರಷ್ಟು ಕಮಿಶಷನ್ ಕೇಳುತ್ತಿದೆ ಎಂದು ಯಡಿಯೂರಪ್ಪ



ಆರೋಪ ಮಾಡಿದ್ದಾರೆ.

ಈ ಸರ್ಕಾರಕ್ಕೆ ಎಚ್ಚರಿಕೆ ಸಂದೇಶ ರವಾನೆ ಮಾಡಲು ವಿಧಾನಸೌಧದ ಎದುರು ಸತ್ಯಾಗ್ರಹ (ಪ್ರತಿಭಟನೆ) ನಡೆಸುತ್ತೇವೆ.

ಕಮಿಷನ್ ಪಡೆಯುವಂತಹ ಪರಿಸ್ಥಿತಿ ಇಂದು ರಾಜ್ಯಾದ್ಯಂತ ಇದೆ. ಈ ಸರ್ಕಾರದ ಕಾರ್ಯವೈಖರಿಯನ್ನು ಖಂಡಿಸುತ್ತೇನೆ. ಈ ಸರ್ಕಾರದ ನೀತಿಗಳನ್ನು ಖಂಡಿಸಿ ವಿಧಾನಸೌಧದ ಮುಂದೆ ಬೃಹತ್ ಸಂಖ್ಯೆಯಲ್ಲಿ ಜನರನ್ನು ಸೇರಿಸಿ ಮೂರು ದಿನಗಳ ಕಾಲ ಪ್ರತಿಭಟನೆ ನಡೆಸುತ್ತೇವೆ. ನಾವು ಪ್ರತಿಭಟನೆಯ ದಿನಾಂಕಗಳನ್ನು ಶೀಘ್ರದಲ್ಲೇ ನಿರ್ಧರಿಸುತ್ತೇವೆ, ಬಹುಶಃ ಬೆಳಗಾವಿ ವಿಧಾನಸಭೆ ಅಧಿವೇಶನಕ್ಕೆ ಮುಂಚಿತವಾಗಿ, ಪ್ರತಿಭಟನೆ ನಡೆಯಲಿದೆ ಮಾಜಿ ಸಿಎಂ ಯಡಿಯೂರಪ್ಪ ತಿಳಿಸಿದ್ದಾರೆ. ಯಡಿಯೂರಪ್ಪ ಇಂದು ಬಿಜೆಪಿ ಶಾಸಕ ಮುನಿರತ್ನ ಪ್ರತಿನಿಧಿಸುವ ಆರ್ ಆರ್ ನಗರ ವಿಧಾನಸಭಾ ಕ್ಷೇತ್ರಕ್ಕೆ ಭೇಟಿ ನೀಡಿದರು.

ಆಡಳಿತಾರೂಢ ಕಾಂಗ್ರೆಸ್ ಸೇಡಿನ ರಾಜಕಾರಣ ಮಾಡುತ್ತಿದೆ ಎಂದು ಆರೋಪಿಸಿದ ಅವರು, ಪ್ರಗತಿಯಲ್ಲಿದ್ದ ಹಾಗೂ ಅನುದಾನ ಬಿಡುಗಡೆಯಾದ ಅಭಿವೃದ್ಧಿ ಕಾಮಗಾರಿಗಳು ಸ್ಥಗಿತಗೊಂಡಿದ್ದು, ಅಪೂರ್ಣಗೊಂಡಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಹಲವಾರು ಪ್ರದೇಶಗಳಲ್ಲಿನ ರಸ್ತೆಗಳ ದುಃಸ್ಥಿತಿಯನ್ನು ಎತ್ತಿ ಹಿಡಿದ ಯಡಿಯೂರಪ್ಪ, ಕಾಂಗ್ರೆಸ್ ಸರ್ಕಾರ ಸಾರ್ವಜನಿಕ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಅಭಿವೃದ್ಧಿಯತ್ತ ಗಮನ ಹರಿಸಬೇಕು ಎಂದು ಒತ್ತಾಯಿಸಿದರು.

ಬೆಳಗಾವಿ: ಅಂಕಲಿ ಗ್ರಾಮದ ಎಟಿಎಂನಲ್ಲಿ ಲಕ್ಷಾಂತರ ರೂ. ದರೋಡೆ ಮಾಡಿದ ಕಿರಾತಕರು

ಬೆಳಗಾವಿ: ಆಕ್ಸಿಸ್ ಬ್ಯಾಂಕ್ ಎಟಿಎಂನಲ್ಲಿ ಗ್ಯಾಸ್ ಕಟರ್ ಬಳಸಿದ ಕಳ್ಳರು ಲಕ್ಷಾಂತರ ರೂ. ಹಣವನ್ನು ದೋಚಿಕೊಂಡು ಹೋಗಿರುವ ಘಟನೆ ಚಿಕ್ಕೋಡಿ ತಾಲೂಕಿನ ಅಂಕಲಿ ಗ್ರಾಮದಲ್ಲಿ ನಡೆದಿದೆ.

ಅಂಕಲಿ ಗ್ರಾಮದಲ್ಲಿ ಎಟಿಎಂನಲ್ಲಿ ಗ್ಯಾಸ್ ಕಟರ್ ಬಳಸಿ ಲಕ್ಷಾಂತರ ರೂ. ಹಣ ಕಳ್ಳತನ ಮಾಡಲಾಗಿದೆ. ಎರಡು ದಿನಗಳ ಹಿಂದೆ 17 ಲಕ್ಷ ರೂಪಾಯಿಯನ್ನು ಬ್ಯಾಂಕ್ ಸಿಬ್ಬಂದಿ ಎಟಿಎಂ ತುಂಬಿದರು. ಸ್ಥಳಕ್ಕೆ ಪೊಲೀಸರು ಹಾಗೂ, ಎಫ್ಎಸ್ಎಲ್ ಸಿಬ್ಬಂದಿ ಭೇಟಿ, ಪರಿಶೀಲನೆ ನಡೆಸಿದ್ದಾರೆ. ಈ ಕಳ್ಳತನದಿಂದ ಜನರಲ್ಲಿ ಆತಂಕಕ್ಕೆ ಕಾರಣವಾಗಿದೆ.

ಅರಣ್ಯ–ಕಂದಾಯ ಭೂಮಿ ಸಮಸ್ಯೆಗೆ ಜಂಟಿ ಸರ್ವೇಯೇ ಪರಿಹಾರ

ಶೀಘ್ರದಲ್ಲೇ ಆನ್‌ಲೈನ್‌ನಲ್ಲಿ ಡೀಮ್ಡ್ ಅರಣ್ಯ ನಕ್ಷೆ ಲಭ್ಯ: ಈಶ್ವರ ಖಂಡ್ರೆ

ಬೆಂಗಳೂರು: ರಾಜ್ಯದಲ್ಲಿ ಅರಣ್ಯ ಮತ್ತು ಕಂದಾಯ ಭೂಮಿಯ ವಿಚಾರದಲ್ಲಿ ಸಮಸ್ಯೆಗಳಿದ್ದು, ಇದನ್ನು ಜಂಟಿ ಸರ್ವೆಯ ಮೂಲಕ ಬಗೆಹರಿಸಬೇಕಾಗಿದೆ. ಡೀಮ್ಡ್ ಅರಣ್ಯ ಎಂದು ಘೋಷಿಸಲಾಗಿರುವ ಸರ್ವೆ ನಂಬರ್ ಮತ್ತು ನಕ್ಷೆಯನ್ನು ಸಾರ್ವಜನಿಕವಾಗಿ ಲಭ್ಯವಾಗುವಂತೆ ಮಾಡುವ ಅಗತ್ಯವಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ.

ಚಿಕ್ಕಮಗಳೂರು ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ. ಜಾರ್ಜ್ ಹಾಗೂ ಜಿಲ್ಲೆಯ ಶಾಸಕರುಗಳೊಂದಿಗೆ ವಿಧಾನಸೌಧದ ಸಮಿತಿ ಸಭಾಂಗಣದಲ್ಲಿಂದು ನಡೆದ ಉನ್ನತ ಮಟ್ಟದ ಸಭೆಯಲ್ಲಿ ಭಾಗಿಯಾಗಿದ್ದ ಅವರು, ಡೀಮ್ಡ್ ಅರಣ್ಯದ ವಿಚಾರದಲ್ಲಿ ಈಗಾಗಲೇ ಸುಪ್ರೀಂಕೋರ್ಟ್ ಗೆ ಪ್ರಮಾಣಪತ್ರ ಸಲ್ಲಿಸಲಾಗಿದೆ. 3.3 ಲಕ್ಷಕ್ಕೂ ಹೆಚ್ಚು ಪ್ರದೇಶವನ್ನು ಡೀಮ್ಡ್ ಅರಣ್ಯ ಎಂದು ಅಂತಿಮಗೊಳಿಸಲಾಗಿದೆ ಎಂದರು.

ಇದರಲ್ಲೂ ಕೆಲವು ಪಟ್ಟಾ ಭೂಮಿ ಇದೆ, ಶಾಲೆ ಇದೆ ಎಂದು ಹೇಳಲಾಗುತ್ತಿದ್ದು, ಈಗ ಪ್ರತಿ ಜಿಲ್ಲೆಯಲ್ಲಿನ ಸಮಸ್ಯೆಗಳ ಬಗ್ಗೆ ಪ್ರತ್ಯೇಕ ಪ್ರಮಾಣಪತ್ರ ಸಲ್ಲಿಸಲು ಸಾಧ್ಯವಿಲ್ಲ. ಹೀಗಾಗಿ ಎಲ್ಲಾ ಜಿಲ್ಲಾಧಿಕಾರಿಗಳು ಅರಣ್ಯ ಇಲಾಖೆಯ ಅಧಿಕಾರಿಗಳೊಂದಿಗೆ ಜಂಟಿ ಸರ್ವೆ ಮಾಡಿಸಿದಲ್ಲಿ ಎಲ್ಲ ಮಾಹಿತಿಯನ್ನೂ ಕ್ರೋಡೀಕರಿಸಿ ಮತ್ತೊಮ್ಮೆ ಸುಪ್ರೀಂಕೋರ್ಟ್ ಗೆ ಪ್ರಮಾಣ ಪತ್ರ ಸಲ್ಲಿಸಬಹುದು. ಆಗ

ಮಾತ್ರ ಈ ಸಮಸ್ಯೆ ಪರಿಹರಿಸಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಡೀಮ್ಡ್ 1 ಎಂದು ಘೋಷಿಸಲಾಗಿದ್ದನ್ನು ಈಗಾಗಲೇ ಕೈಬಿಡಲಾಗಿದೆ. ಡೀಮ್ಡ್ 2 ಎಂದು ಘೋಷಿಸಿರುವುದು ಅಂತಿಮವಾಗಿದ್ದು, ಇದರಲ್ಲಿ ಏನಾದರೂ ಸಮಸ್ಯೆಗಳಿದ್ದರೆ ಅದನ್ನು ಪರಿಹರಿಸಲು ಪ್ರಯತ್ನಿಸಲಾಗುವುದು, ಜಂಟಿ ಸಮೀಕ್ಷೆ ಪೂರ್ಣವಾಗುವವರೆಗೆ 4(1) ಪ್ರಕ್ರಿಯೆ ನಡೆಸದಂತೆ ಸೂಚಿಸುವುದಾಗಿ ಚಿಕ್ಕಮಗಳೂರು ಭಾಗದ ಶಾಸಕರುಗಳಿಗೆ ಅರಣ್ಯ ಸಚಿವ ಈಶ್ವರ ಖಂಡ್ರೆ ಭರವಸೆ ನೀಡಿದರು.

ಕಾಡಾನೆ ಸಮಸ್ಯೆಗೂ ಪರಿಹಾರ: ಮಳೆ ಕೊರತೆಯಿಂದ ಕಾಡಾನೆಗಳ ಹಾವಳಿಯೂ ಹೆಚ್ಚಳವಾಗುತ್ತಿದ್ದು, ರೈಲ್ವೆ ಬ್ಯಾರಿಕೇಡ್ ಅಳವಡಿಕೆ ಇದಕ್ಕೆ ಸೂಕ್ತ ಪರಿಹಾರ ಮಾರ್ಗವಾಗಿದೆ. ಈ ಹಿನ್ನೆಲೆಯಲ್ಲಿ ಪ್ರಸ್ತಾವನೆ ಸಲ್ಲಿಸಲು ಇಲಾಖೆಗೆ ಸೂಚಿಸಲಾಗಿದೆ ಎಂದರು. ಚಿಕ್ಕಮಗಳೂರು ಭಾಗದಲ್ಲಿ ಬೀಡು ಬಿಟ್ಟಿರುವ ಆನೆಗಳನ್ನು ಕಾಡಿಗೆ ಮರಳಿಸಲು ಮತ್ತು ಪುಂಡಾನೆಯನ್ನು ಹಿಡಿದು ಆನೆ ಶಿಬಿರಕ್ಕೆ ಸ್ಥಳಾಂತರಿಸಲು ಸೂಚಿಸಲಾಗಿದೆ ಎಂದು ತಿಳಿಸಿದರು.

ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಠಾರಿಯಾ ಮಾತನಾಡಿ, ಒಂದು ವಾರದೊಳಗೆ ಡೀಮ್ಡ್ ಅರಣ್ಯ, ಮೀಸಲು ಅರಣ್ಯದ ಮಾಹಿತಿಯನ್ನು ಸಾರ್ವಜನಿಕವಾಗಿ ಲಭ್ಯವಾಗುವಂತೆ ಮಾಡಲಾಗುವುದು. ಈಗ ಅತ್ಯಾಧುನಿಕ ಡ್ರೋನ್ ನಂತಹ ಸಲಕರಣೆ ಇದ್ದು, ಜಂಟಿ ಸರ್ವೆ ಮಾಡಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಅಮಾನತು



ಕಲಬುರಗಿ: ಸರ್ಕಾರದ ಮಾರ್ಗಸೂಚಿ ಉಲ್ಲಂಘಿಸಿ ಕರ್ತವ್ಯ ಲೋಪ ಎಸಗಿದ ಹಿನ್ನಲೆ ಕಲಬುರಗಿ ಜಿಲ್ಲಾ ಕಾರ್ಮಿಕ ಅಧಿಕಾರಿ ರಮೇಶ್ ಸುಂಬಡ್ ರನ್ನು ಅಮಾನತು ಮಾಡಿ ಸರ್ಕಾರ ಆದೇಶಿಸಿದೆ. ಜೇಷ್ಠತೆ ಇಲ್ಲದ ಅರ್ಜಿಗಳ ಪರಿಗಣನೆ ಹೆಚ್ಚುವರಿ ಮೊತ್ತ ಸಹಾಯಧನ ಪಾವತಿ ಮಾಡಿದ ಆರೋಪ ರಮೇಶ್ ಮೇಲಿದೆ. ಕಾರ್ಮಿಕ ಆಯುಕ್ತರ ಕಚೇರಿ ನೀಡಿದ ವರದಿ ಅನ್ವಯ ಸರ್ಕಾರ ಅಮಾನತು ಮಾಡಿದೆ. ಕಾರ್ಮಿಕರ ಕಲ್ಯಾಣ ಮಂಡಳಿಯ ಫಲಾನುಭವಿಯೊಬ್ಬರಿಗೆ 9 ಸಾವಿರ ಬದಲು 90 ಸಾವಿರ ಜಮೆ ಮಾಡಿರುವುದು ಬೆಳಕಿಗೆ ಬಂದಿದೆ. ಈ ಬಗ್ಗೆ ಕೆಲ ಸಂಘಟನೆಯವರು ಸಚಿವ ಸಂತೋಷ್ ಲಾಡ್ ಗೆ ಮನವಿ ಸಹ ಸಲ್ಲಿಸಿದ್ದಾರೆ.

ಸಚಿವ ಸತೀಶ್ ಜಾರಕಿಹೊಳಿ–ಡಿಕೆ ಸುರೇಶ್ ಮಹತ್ವದ ಭೇಟಿ

ಬೆಂಗಳೂರು: ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಸಂಸದ ಡಿಕೆ ಸುರೇಶ್ ಅವರು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ಎರಡು ದಿನಗಳ ಹಿಂದೆ ಸತೀಶ್ ಜಾರಕಿಹೊಳಿ–ಡಿಕೆ ಶಿವಕುಮಾರ್ ಭೇಟಿಯಾಗಿದ್ದರು. ಇದೀಗ ಜಾರಕಿಹೊಳಿ ನಿವಾಸದಲ್ಲಿ ಡಿಕೆ ಸುರೇಶ್ ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ.

ನಂತರ ಮಾಧ್ಯಮಕ್ಕೆ ಪ್ರತಿಕ್ರಿಯೆ ನೀಡಿದ ಸಂಸದ ಡಿಕೆ ಸುರೇಶ್, ನಮ್ಮ ಕಾರ್ಯಾಧ್ಯಕ್ಷರು ಜೊತೆಗೆ ಮಹತ್ತರವಾದ ಖಾತೆ ಹೊಂದಿದ ಸಚಿವರು ಸತೀಶ್ ಜಾರಕಿಹೊಳಿ ಅವರು. ಮಳೆಯಿಂದ ರಸ್ತೆ ಗುಂಡಿಗಳು ಬಿದ್ದು ದೊಡ್ಡ ಸಮಸ್ಯೆ ಆಗಿದೆ. ಕ್ಷೇತ್ರದ ರಸ್ತೆಗಳ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡಬೇಕು ಅಂತ ಕೇಳುವುದಕ್ಕೆ ಬಂದಿದ್ದೆ. ಭೇಟಿಗೆ ಸಕಾರಾತ್ಮಕ ಸ್ಪಂದಿಸಿದ್ದಾರೆ. ಸರ್ಕಾರ ಅನುಮೋದನೆ ಕೊಟ್ಟ ತಕ್ಷಣ ನನ್ನ ಕ್ಷೇತ್ರಕ್ಕೂ ಹೆಚ್ಚಿನ ಅನುದಾನ

ನೀಡುವುದಾಗಿ ಭರವಸೆ ಕೊಟ್ಟಿದ್ದಾರೆ ಎಂದು ಹೇಳಿದರು.

ಯಾರು ಸಿಎಂ ಆದ್ರೂ ಕೂಡ ನಾನು ಸ್ವಾಗತ ಮಾಡ್ತೇನೆ ಎಂದು ಹೇಳಿದ ಡಿಕೆ ಸುರೇಶ್, ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿ ಇರಬೇಕು ಅಂತ ಆಸೆ ಪಟ್ಟವರು ನಾನು. ಈಗ ಸಿಎಂ ಸ್ಥಾನದಲ್ಲಿ ಸಿದ್ದರಾಮಯ್ಯ ಇದ್ದಾರೆ, ಮುಂದಿನ ದಿನಗಳಲ್ಲಿ ನಾನೂ ಸಿಎಂ ಆಕಾಂಕ್ಷಿ ಅಂತ ಸತೀಶ್ ಹೇಳಿದ್ದಾರೆ. ಅದರಲ್ಲಿ ತಪ್ಪೇನೂ ಇಲ್ಲ, ಸಿಎಂ ಆಕಾಂಕ್ಷಿಗಳ ಪಟ್ಟಿ ದೊಡ್ಡದಿದೆ, ಯಾರೂ ಆಗಬಾರದು ಎನ್ನಂಗಿಲ್ಲ.

ಶಾಸಕರಾದವರಿಗೆ ಮಂತ್ರಿ ಆಗಬೇಕು ಅಂತ ಆಸೆ, ಮಂತ್ರಿ ಆದವರಿಗೆ ಮುಖ್ಯಮಂತ್ರಿ ಆಗಬೇಕು ಅಂತ ಆಸೆ. ಏನೂ ಇಲ್ಲದವರಿಗೆ ಶಾಸಕರಾಗಬೇಕು ಅಂತ ಆಸೆ. ಇದೊಂದು ಸೈಕಲ್, ಯಾರೂ ತಪ್ಪಿಸಲು ಸಾಧ್ಯವಿಲ್ಲ ಎಂದು ಹೇಳಿದರು.

ಇನ್ನು, ಬಿಜೆಪಿಯಿಂದ ಆಪರೇಷನ್ ಕಮಲ ಪ್ರಯತ್ನದ ವಿಚಾರವಾಗಿ ಮಾತನಾಡಿದ ಸಂಸದ ಡಿಕೆ ಸುರೇಶ್, ಬಿಜೆಪಿಯವರಿಗೆ ಆಪರೇಷನ್ ಬಿಟ್ಟರೆ ಬೇರೆ ಇನ್ನೇನಾದರೂ ಗೊತ್ತಿದೆಯಾ? ಆಪರೇಷನ್ ಒಂದೇ ಗೊತ್ತಿರೋದು. ಜನಕ್ಕೆ ಏನು ಬೇಕೋ ಅದನ್ನು ಮಾಡುವುದು ಗೊತ್ತಿಲ್ಲ ಅವರಿಗೆ. ಭ್ರಷ್ಟಾಚಾರದಲ್ಲಿ ಮುಳುಗಿ ಕೆಲಸ ಇಲ್ಲದೇ ಕೂತಿದ್ದಾರೆ ಇವತ್ತು ಜನರೇ ತಿರಸ್ಕಾರ ಮಾಡಿದ್ದಾರೆ ಇವರನ್ನು. ಜನರು ಬಿಜೆಪಿ ಮೇಲೆ ನಂಬಿಕೆ ಕಳೆದುಕೊಂಡಾಗ ಈ ತರಹ ಮಾತಾಡೋದು ಸರ್ವೆ ಸಾಮಾನ್ಯ ಎಂದರು.

ಹಸಿ ಮೊಟ್ಟೆ ಕುಡಿಯೋ ಅಭ್ಯಾಸ ಒಳ್ಳೆಯದಾ? ಜನರ ಮನಸ್ಸನ್ನು ಬೇರೆ ಕಡೆಗೆ ಒಯ್ಯಬೇಕು ಅಂದರೆ ಬಿಜೆಪಿ ಆಪರೇಷನ್ ಹೆಸರೇ ಹೇಳಬೇಕು ಎಂದ ಸುರೇಶ್, ಬಿಜೆಪಿಗೆ ನಮ್ಮ ಗ್ಯಾರಂಟಿಗಳಿಂದ ಆಘಾತ ಆಗಿದೆ. ಆಘಾತ ತಪ್ಪಿಸಿಕೊಳ್ಳಲು ಆಪರೇಷನ್ ಕಮಲದ ಹೆಸರು ಹೇಳ್ತಿದ್ದಾರೆ. ವಿಪಕ್ಷ ನಾಯಕರು ಇದ್ದಾರೋ ಇಲ್ವೋ ಅವರಿಗೆ ಬಿಟ್ಟಿದ್ದು, ಆದರೆ ಅವರ ತಟ್ಟೆಯಲ್ಲಿ ಹೆಗ್ಗಣ ಬಿದ್ದಿದ್ದು, ನಮ್ಮ ತಟ್ಟೆಯಲ್ಲಿ ಜಿರಳೆ ಹುಡುಕಿದ್ರೆ ನಾವೇನು ಮಾಡೋಕಾಗತ್ತೆ? ಎಂದು ವ್ಯಂಗ್ಯವಾಡಿದರು.

ಎಂಎಸ್‌ಇಝಡ್ ಯೋಜನೆ: ನಿರ್ವಸಿತರಿಗೆ ಉದ್ಯೋಗ, ದಿನೇಶ್ ಗುಂಡೂರಾವ್ ನೇತೃತ್ವದಲ್ಲಿ ಮಹತ್ವದ ಸಭೆ

ಬೆಂಗಳೂರು: ಎಂಎಸ್‌ಇಝಡ್ ಯೋಜನೆಗಾಗಿ ಭೂಮಿ ಕಳೆದುಕೊಂಡಿರುವ ನಿರ್ವಸಿತರಿಗೆ ಉದ್ಯೋಗ ನೀಡುವ ಮತ್ತು ಉದ್ಯೋಗದಲ್ಲಿ ಮುಂದುವರಿಸುವ ಕುರಿತು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ನೇತೃತ್ವದಲ್ಲಿ ಗುರುವಾರ ಮಹತ್ವದ ವರ್ಚುಯಲ್ ಸಭೆ ನಡೆಯಿತು. ಸಂಸದ ನಳಿನ್ ಕುಮಾರ್ ಕಟೀಲ್, ಶಾಸಕ ಉಮಾನಾಥ ಕೋಟ್ಯಾನ್, ಜಿಲ್ಲಾಧಿಕಾರಿ ಮುಲ್ಲೈ ಮುಹಿಲನ್, ಕಂಪನಿಗಳ ಹಾಗೂ ಹೋರಾಟ ಸಮಿತಿಯ ಪ್ರತಿನಿಧಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ಹಂಚಿಕೊಂಡಿರುವ ದಿನೇಶ್ ಗುಂಡೂರಾವ್, ಯೋಜನೆಗಾಗಿ ಭೂಮಿ ಕಳೆದುಕೊಂಡವರ ಉದ್ಯೋಗ ವಿಚಾರದಲ್ಲಿನ ಎಲ್ಲಾ ಗೊಂದಲಗಳನ್ನು ಡಿಸೆಂಬರ್ 01ನೇ ತಾರೀಖಿನ ಒಳಗಾಗಿ ಪರಿಹರಿಸಬೇಕು.

ತಪ್ಪಿದ್ದಲ್ಲಿ ಗೈಲ್ ಮಂಗಳೂರು ಪೆಟ್ರೋಕೆಮಿಕಲ್ಸ್ ಲಿಮಿಟೆಡ್ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿರುವುದಾಗಿ ತಿಳಿಸಿದ್ದಾರೆ.

ಭೂಸ್ವಾಧೀನದ ಭಾಗವಾಗಿ ಭೂಮಿ ಕಳೆದುಕೊಂಡವರಿಗೆ ಕರ್ನಾಟಕ ಸರಕಾರವು ಉದ್ಯೋಗದ ಭರವಸೆ ನೀಡಿದೆ. ನೇಮಕಾತಿ ನಿಯಮಗಳನ್ನು ಮುಂದಿಟ್ಟು ಉದ್ಯೋಗ ನಿರಾಕರಿಸಲು ಸಾಧ್ಯವಿಲ್ಲ. ಎಂಆರ್‌ವಿಎಲ್ ಮತ್ತು ಐಎಸ್‌ಪಿಆರ್‌ಎಲ್ ಸಂಸ್ಥೆಗಳು ಉದ್ಯೋಗ ನೀಡಿರುವ ರೀತಿಯನ್ನೇ ಜಿಎಂಪಿಎಲ್ ಅನುಸರಿಸಬೇಕು ಎಂದು ಸೂಚನೆ ನೀಡಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ವಿಧಾನ ಸಭೆ ಮತ್ತು ವಿಧಾನ ಪರಿಷತ್‌ನಲ್ಲಿ ಅರಣ್ಯವಾಸಿ, ಕಸ್ತೂರಿ ರಂಗನ್ ವರದಿ ಸಮಗ್ರವಾಗಿ ಚರ್ಚಿಸಲು ಮನವಿ

ಬೆಂಗಳೂರು: ಬೆಳಗಾಂವದಲ್ಲಿ ಜರುಗಲಿರುವ ಮುಂಬರುವ ಚಳಿಗಾಲದ ಅಧಿವೇಶನದಲ್ಲಿ ಅರಣ್ಯ

ಕಬ್ಬು ಸಾಗಿಸುತ್ತಿದ್ದ 2 ಟ್ರ್ಯಾಕ್ಟರ್‌ಗೆ ಬೆಂಕಿ

ಬೆಳಗಾವಿ: ಮಹಾರಾಷ್ಟ್ರದ ಹುಪರಿಯ ಜವಾಹರ ಸಕ್ಕರೆ ಕಾರ್ಖಾನೆಗೆ ಕಬ್ಬು ಸಾಗಿಸುತ್ತಿದ್ದ 2 ಟ್ರ್ಯಕ್ಟರ್‌ಗಳಿಗೆ ಬೆಂಕಿ ಹಚ್ಚಿದ ಘಟನೆ ಜಿಲ್ಲೆಯ ನಿಪ್ಪಾಣಿ ತಾಲೂಕಿನ ಕಾರದಗಾ ಗ್ರಾಮದಲ್ಲಿ ನಿನ್ನೆ ರಾತ್ರಿಯ ನಡೆದಿದೆ.

ಮಹಾರಾಷ್ಟ್ರದ ಹುಪರಿಯ ಜವಾಹರ ಸಕ್ಕರೆಗೆ ಸಾಗಿಸುತ್ತಿದ್ದ ಕಬ್ಬು ಸಾಗಿಸುತ್ತಿದ್ದ ವೇಳೆ ಈ ಘಟನೆ ನಡೆದಿದೆ.

ಮಹಾರಾಷ್ಟ್ರದಲ್ಲಿ ಮಾಜಿ ಸಂಸದ ರಾಜು ಶೆಟ್ಟಿ ನೇತೃತ್ವದ ಸ್ವಾಭಿಮಾನಿ ರೈತ ಸಂಘಟನೆಯಿಂದ ಪ್ರಸ್ತಕ ವರ್ಷದ ಕಬ್ಬಿಗೆ 3500 ರೂಪಾಯಿ ದರ ಹಾಗೂ ಕಳೆದ ವರ್ಷ ಹೋದ ಕಬ್ಬಿಗೆ ಹೆಚ್ಚುವರಿಯಾಗಿ ಟನ್‌ಗೆ 400 ರೂಪಾಯಿ ದರ ನೀಡಬೇಕು ಇಲ್ಲವಾದ್ರೆ ಸಕ್ಕರೆ ಕಾರ್ಖಾನೆಗಳು ಪ್ರಾರಂಭಿಸಬಾರದೆಂದು ಪ್ರತಿಭಟನೆಗಳು ನಡೆಯುತ್ತಿದೆ.

ಈ ನಡುವೆ ಕರ್ನಾಟಕದಿಂದ ಮಹಾರಾಷ್ಟ್ರ ಜವಾಹಲರ ಸಕ್ಕರೆ ಕಾರ್ಖಾನೆಗೆ ಕಬ್ಬು ಸಾಗಿಸುತ್ತಿದ್ದ 2 ಟ್ರ್ಯಕ್ಟರಗೆ ಕಾರದಗಾ–ರೇಂದಾಳ ರಸ್ತೆಯ ಮಧ್ಯೆ ಕಬ್ಬು ತುಂಬಿದ ಟ್ರ್ಯಕ್ಟರಗೆ ಬೆಂಕಿ ಹಚ್ಚಲಾಗಿದೆ.

ಟ್ರ್ಯಕ್ಟರ್ ಮಾಲೀಕ ಸದಲಗಾ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಪ್ರಕರಣದ ಕುರಿತು ಪೊಲೀಸರು ತನಿಖೆಯನ್ನು ಕೈಗೆತ್ತಿಕೊಂಡಿದ್ದಾರೆ.

ಸರ್ಕಾರದಿಂದ ಸೇಡಿನ ರಾಜಕಾರಣ ಖಂಡಿಸಿ ಮೂರು ದಿನ ಸತ್ಯಾಗ್ರಹ: ಬೆಂಗಳೂರು ಸಿಟಿ ರೌಂಡ್ಸ್ ಹಾಕಿದ ಬಿ ಎಸ್ ಯಡಿಯೂರಪ್ಪ

ಬೆಂಗಳೂರು: ಕಳೆದ ಮೂರು ದಿನಗಳಿಂದ ರಾಜಧಾನಿ ಬೆಂಗಳೂರಿನಲ್ಲಿ ಸುರಿದ ಧಾರಾಕಾರ ಮಳೆಯಿಂದ ಹಲವು ಭಾಗಗಳಲ್ಲಿ ಅವಾಂತರ ಉಂಟಾಗಿದೆ. ಬೆಂಗಳೂರಿನಲ್ಲಿ ಮಳೆಯಿಂದಾಗಿ ಭಾರೀ ಸಮಸ್ಯೆಗಳು ಎದುರಾಗುತ್ತಿವೆ. ಈ ಬಗ್ಗೆ ಸ್ಥಳೀಯ ನಿವಾಸಿಗಳು ಬಿಬಿಎಂಪಿ, ಸರ್ಕಾರ ವಿರುದ್ಧ ಆಕ್ರೋಶ ಹೊರಹಾಕುತ್ತಿದ್ದಾರೆ.

ಬೆಂಗಳೂರಿನ ಮಳೆ ಅವಾಂತರ ಬಗ್ಗೆ ವಸ್ತು ಸ್ಥಿತಿ ಅರಿತು ಸರ್ಕಾರದ ಗಮನಕ್ಕೆ ತರಲೆಂದು ಇಂದು ಬುಧವಾರ ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ಬೆಂಗಳೂರು ಸಿಟಿ ರೌಂಡ್ಸ್ ನಡೆಸಿದರು. ರಾಜರಾಜೇಶ್ವರಿ ನಗರ ಕ್ಷೇತ್ರದಲ್ಲಿ ಬಿ.ಎಸ್.ಯಡಿಯೂರಪ್ಪ ರೌಂಡ್ಸ್ ಹಾಕಿ ಸ್ಥಗಿತಗೊಂಡ ಕಾಮಗಾರಿಗಳ ವೀಕ್ಷಣೆ ಮಾಡಿದ್ದಾರೆ. ಹೊಸಕೆರೆಹಳ್ಳಿ ಭಾಗದಲ್ಲಿ ಸ್ಥಗಿತಗೊಂಡ ಕಾಮಗಾರಿಗಳ ವೀಕ್ಷಣೆ ಮಾಡಿದರು. ಬಿಎಸ್ವೈಯವರಿಗೆ ಶಾಸಕರಾದ ಅಶ್ವತ್ಥ್ ನಾರಾಯಣ, ಮುನಿರತ್ನ ಸಾಥ್ ನೀಡಿದರು.

3 ದಿನ ಸತ್ಯಾಗ್ರಹ: ಈ ವೇಳೆ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಆರ್ ಆರ್ ನಗರದಲ್ಲಿ ಎಲ್ಲಾ ವ್ಯವಹಾರಗಳು ಸ್ಥಗಿತಗೊಂಡಿವೆ. ಸರ್ಕಾರದಿಂದ ಅಭಿವೃದ್ಧಿ ಕಾರ್ಯಗಳು ಆಗುತ್ತಿಲ್ಲ. ಈ ತಿಂಗಳ ಅಂತ್ಯದಲ್ಲಿ ಮೂರು ದಿನ ಸತ್ಯಾಗ್ರಹ ಮಾಡುತ್ತೇನೆ. ವಿಧಾನಸೌಧ ಅಥವಾ ಫ್ರೀಡಂಪಾರ್ಕ್‌ನಲ್ಲಿ ಸತ್ಯಾಗ್ರಹ ಮಾಡ್ತೇನೆ. ನಾಳೆ ಸತ್ಯಾಗ್ರಹದ ದಿನಾಂಕ ನಿಗದಿ ಮಾಡುತ್ತೇನೆ. ಮುನಿರತ್ನ ಕ್ಷೇತ್ರದಲ್ಲಿ ಸರ್ಕಾರ ಸೇಡಿನ ರಾಜಕಾರಣ ಮಾಡುತ್ತಿದೆ, ಅಭಿವೃದ್ಧಿ ಕಾರ್ಯ ಸ್ಥಗಿತವಾಗಿದೆ. ಇದೆಲ್ಲವನ್ನೂ ಪ್ರತಿಭಟಿಸಿ ಸತ್ಯಾಗ್ರಹ ಮಾಡುತ್ತೇನೆ ಎಂದರು.

ತಮ್ಮ ಕ್ಷೇತ್ರಕ್ಕೆ ಸರ್ಕಾರ ಕೆಲಸ ಕಾರ್ಯಗಳಿಗೆ ಅಡ್ಡಿಪಡಿಸುತ್ತಿದೆ, ಅನುದಾನ ನೀಡುತ್ತಿಲ್ಲ ಎಂದು ಆರೋಪಿಸಿ ಕಳೆದ ತಿಂಗಳು ಕ್ಷೇತ್ರದ ಶಾಸಕ ಮುನಿರತ್ನ ವಿಧಾನ ಸೌಧ ಮುಂದೆ ಸತ್ಯಾಗ್ರಹ ಕುಳಿತಿದ್ದರು.

ಪಾಲಿಕೆಯ ವಿವಿಧ ಆಸ್ಪತ್ರೆಗಳಿಗೆ ತಾತ್ಕಾಲಿಕವಾಗಿ ವೈದ್ಯಕೀಯ ಸಿಬ್ಬಂದಿಗಳ ನೇಮಕಾತಿಗಾಗಿ ಅರ್ಜಿ ಆಹ್ವಾನ; ನ.22 ಮತ್ತು 23 ರಂದು ನೇರ ಸಂದರ್ಶನ

ಹುಬ್ಬಳ್ಳಿ: ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ವಿವಿಧ ಆಸ್ಪತ್ರೆಗಳಲ್ಲಿ ಅವಶ್ಯಕತೆಗನುಗುಣವಾಗಿ ಪ್ರಸೂತಿ ಹಾಗೂ ಸ್ತ್ರೀರೋಗ ತಜ್ಞ ವೈದ್ಯರು, ಎ.ಮ್.ಬಿ.ಬಿ.ಎಸ್. ವೈದ್ಯರು ಹಾಗೂ ಸಾಮಾನ್ಯ ವೈದ್ಯರು, ಅರವಳಿಕೆ ತಜ್ಞರು ಮತ್ತು ಅರೆ ವೈದ್ಯಕೀಯ ಸಿಬ್ಬಂದಿಗಳು, ಎಲ್.ಡಿ.ಸಿ., ಡೇಸ್ಸರ್, ವಾರ್ಡಬಾಯ್, ಆಯಾ ಮತ್ತು ಅಂಬ್ಯೂಲೆನ್ಸ್ ವಾಹನ ಚಾಲಕರುಗಳ ಹುದ್ದೆಗೆ ಮಾಸಿಕ ಗೌರವಧನ ಆಧಾರದ ಮೇಲೆ ಹನ್ನೊಂದು ತಿಂಗಳ ಅವಧಿಗೆ ಸೇವೆಯನ್ನು ಪಡೆದುಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಮಹಾನಗರ ಪಾಲಿಕೆ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ ಅವರು ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ವಿವಿಧ ಆಸ್ಪತ್ರೆಗಳಲ್ಲಿ ಅವಶ್ಯಕತೆಗನುಗುಣವಾಗಿ ಪ್ರಸೂತಿ ಹಾಗೂ ಸ್ತ್ರೀರೋಗ ತಜ್ಞರು ಎಮ್.ಬಿ.ಬಿ.ಎಸ್. ಸಾಮಾನ್ಯ ವೈದ್ಯರು, ಹಾಗೂ ಅರೇ ವೈದ್ಯಕೀಯ ಸಿಬ್ಬಂದಿಗಳನ್ನು ಹನ್ನೊಂದು ತಿಂಗಳ ಅವಧಿಗೆ ಮಾಸಿಕ ಗೌರವಧನ ಆಧಾರದ ಮೇಲೆ ಸೇವೆಯನ್ನು ಪಡೆದುಕೊಳ್ಳಲು ಉದ್ದೇಶಿಸಲಾಗಿದೆ. ಈ ಹುದ್ದೆಗಳಿಗೆ ಸಂಬಂಧಪಟ್ಟ ವಿದ್ಯಾರ್ಹತೆ ಹೊಂದಿದ ಆಸಕ್ತಿವುಳ್ಳ ಅಭ್ಯರ್ಥಿಗಳು ತಮ್ಮ ಮೂಲ ಹಾಗೂ ದೃಡೀಕೃತ ಸರ್ಟಿಫಿಕೇಟಗಳೊಂದಿಗೆ ನವೆಂಬರ್ 7 ರಿಂದ 18, 2023 ರವರೆಗೆ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಹು.ಧಾ.ಮ.ಪಾಲಿಕೆಯ ಚಿಟಗುಪ್ಪಿ ಆಸ್ಪತ್ರೆ ಆಡಳಿತ ಕಛೇರಿ ನಂ.14ರಲ್ಲಿ ದ್ವಿತೀಯ ದರ್ಜೆ ಸಹಾಯಕರ ಹತ್ತಿರ ಹೆಸರು ನೊಂದಾಯಿಸಿಕೊಳ್ಳಬಹುದು. ಅರ್ಜಿ ಸಲ್ಲಿಸಿದ ಅರ್ಹ ಅಭ್ಯರ್ಥಿಗಳನ್ನು ನೇರ ಸಂದರ್ಶನಕ್ಕೆ ಆಹ್ವಾನಿಸಲಾಗುವುದು. ನವೆಂಬರ್ 22, 2023 ರಂದು ವೈದ್ಯರು ಮತ್ತು ಅರೇ ವೈದ್ಯಕೀಯ ಸಿಬ್ಬಂದಿಗಳಿಗೆ ಮತ್ತು ನವೆಂಬರ್ 23, 2023 ರಂದು ಎಲ್.ಡಿ.ಸಿ., ಡೇಸ್ಸರ್, ವಾರ್ಡಬಾಯ್, ಆಯಾ ಮತ್ತು ಅಂಬ್ಯೂಲೆನ್ಸ್ ವಾಹನ ಚಾಲಕರಿಗೆ ನೇರ ಸಂದರ್ಶನವನ್ನು ನಡೆಸಲಾಗುತ್ತಿದೆ. ಹೆಚ್ಚಿನ ವಿವರಗಳನ್ನು www.hdmc.mrc.gov.in ವೆಬ್ಸೈಟನಲ್ಲಿ ಪಡೆದುಕೊಳ್ಳಬಹುದು ಎಂದು ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಳಿಗಾಲ ಅಧಿವೇಶನಕ್ಕೆ ಬರುವ ಜನಪ್ರತಿನಿಧಿಗಳೇ ಆತಿಥ್ಯ ನೀಡಲು ಮುಂದಾದ ಬೆಳಗಾವಿ ರೈತರು

ಬೆಳಗಾವಿ: ಬೆಳಗಾವಿಯಲ್ಲಿ ನಡೆಯುವ ಚಳಿಗಾಲ ಅಧಿವೇಶನಕ್ಕೆ ಬರುವ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳಿಗೆ ಆತಿಥ್ಯ ನೀಡಲು ಜಿಲ್ಲೆಯ ರೈತರು ಸಜ್ಜಾಗಿದ್ದಾರೆ. ಭೀಕರ ಬರಗಾಲ ಹಿನ್ನೆಲೆ ದುಂದು ವೆಚ್ಚಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಅಧಿವೇಶನ ಮುಗಿಯೋವರೆಗೂ ನಮ್ಮ ಮನೆಯಲ್ಲಿ ಇರುವಂತೆ ಬಹಿರಂಗ ಆಹ್ವಾನ ಕೊಟ್ಟಿದ್ದಾರೆ.

ಸರ್ಕಾರ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್ ತಿಂಗಳಲ್ಲಿ ಚಳಿಗಾಲ ಅಧಿವೇಶನ ನಡೆಸಲು ಸರ್ಕಾರ ಸಿದ್ಧತೆ ನಡೆಸಿದೆ.

ಇನ್ನು ಅಧಿವೇಶನಕ್ಕೆ ಬರುವ ಶಾಸಕರು, ಮಂತ್ರಿ ಮಹೋದಯರು ಮತ್ತು ಅಧಿಕಾರ ವರ್ಗ ಉಳಿದುಕೊಳ್ಳಲು, ಊಟ – ಉಪಚಾರಕ್ಕೆ ಕೋಟಿ, ಕೋಟಿ ಖರ್ಚಾಗುತ್ತದೆ. ಈ ಆರ್ಥಿಕ ಹೊರೆ ತಗ್ಗಿಸಲು ಬೆಳಗಾವಿ ಜಿಲ್ಲೆಯ ರೈತ ಮುಖಂಡರು ಮತ್ತು ರೈತರು ಮುಖ್ಯಮಂತ್ರಿ ಸಹಿತ, ಸಚಿವರು, ಆಡಳಿತ ಮತ್ತು ವಿರೋಧ ಪಕ್ಷದ ಶಾಸಕರು ಹಾಗೂ ಪರಿಷತ್ ಸದಸ್ಯರಿಗೆ ತಮ್ಮ ಮನೆಗಳಲ್ಲಿ ವಸತಿ ಮತ್ತು ಊಟದ ವ್ಯವಸ್ಥೆ ಮಾಡಲು ಮುಂದಾಗಿದ್ದಾರೆ.

ಬೆಳಗಾವಿ ತಾಲೂಕಿನ ಹಲಗಾ, ಬಸ್ತವಾಡ, ಕೊಂಡಸಕೊಪ್ಪ, ಕೋಳಿಕೊಪ್ಪ, ಧಾಮನೆ, ಕೆ.ಕೆ. ಕೊಪ್ಪ, ಮಜಗಾವಿ, ಮಚ್ಛೆ, ಹಿರೇಬಾಗೇವಾಡಿ, ಸಾಂಬ್ರಾ, ಕಾಕತಿ, ಬಸ್ಸಾಪುರ, ಅರಳೀಕಟ್ಟಿ, ಚಂದನಹೊಸುರ, ಗಣಿಕೊಪ್ಪ, ಹೊನಗಾ, ಕಡೋಲಿ, ಅಂಬೇವಾಡಿ, ಉಚಗಾಂವ, ಪೀರಣವಾಡಿ, ದೇಸೂರ, ನಂದಿಹಳ್ಳಿ, ಸುಳೇಭಾವಿ, ಮಾರಿಹಾಳ ಸೇರಿ 25 ಹಳ್ಳಿಗಳ 500ಕ್ಕೂ ಹೆಚ್ಚು ಮನೆಗಳಲ್ಲಿ ಅಧಿವೇಶನಕ್ಕೆ ಬರುವರ ಆತಿಥ್ಯಕ್ಕೆ ರೈತರು ತಯಾರಿ ನಡೆಸುತ್ತಿದ್ದಾರೆ. ಒಟ್ಟಾರೆ ಅಧಿವೇಶನಕ್ಕೆ ಬರುವ ಆಡಳಿತ ವರ್ಗ ಫೈವ್ ಸ್ಟಾರ್ ಹೋಟೆಲ್ಗಳಲ್ಲಿದ್ದು ಕೋಟಿ, ಕೋಟಿ ಖರ್ಚು ಮಾಡುವುದು ಕೈ ಬಿಟ್ಟು ರೈತರ ಪ್ರೀತಿಯ ಆಹ್ವಾನ ಸ್ವೀಕರಿಸಿ, ದುಂದು ವೆಚ್ಚಕ್ಕೆ ಕಡಿವಾಣ ಹಾಕುತ್ತಾ ಎಂದು ಕಾದು ನೋಡಬೇಕಿದೆ.

ಬೆಂಗಳೂರು: ಮಹಿಳೆ ಸ್ನಾನ ಮಾಡುವಾಗ ವೀಡಿಯೋ ಚಿತ್ರೀಕರಣ; ಫಿಟ್ನೆಸ್ ಸೆಂಟರ್ ಕೋಚ್ ಬಂಧನ

ಬೆಂಗಳೂರು: ತರಬೇತಿಯ ನಂತರ ಸ್ನಾನ ಮಾಡುತ್ತಿರುವ ಮಹಿಳೆಯ ಫೋಟೋ ಮತ್ತು ವೀಡಿಯೊ ಮಾಡುತ್ತಿದ್ದ ಪ್ರತಿಷ್ಠಿತ ಫಿಟ್‌ನೆಸ್ ಸೆಂಟರ್‌ನ ತರಬೇತುದಾರನನ್ನು ಬಂಧಿಸಲಾಗಿದೆ.

ಬಾಣಸವಾಡಿ ಪ್ರದೇಶದ ಎನ್‌ಆರ್‌ಐ ಲೇಔಟ್ ಬಳಿ ಇರುವ ಫಿಟ್ ನೆಸ್ ಸೆಂಟರ್ ಕೋಚ್ ವಿರುದ್ಧ 29 ವರ್ಷದ ಮಹಿಳೆಯೊಬ್ಬರು ದೂರು ದಾಖಲಿಸಿದ್ದಾರೆ. ಮಹಿಳೆ ಬಾತ್ ರೂಂನ ಕಿಟಕಿಯ ಬಳಿ ಮೊಬೈಲ್ ಫೋನ್ ನೋಡಿದ್ದಾರೆ, ಆಕೆ ಹೊರಗೆ ಬಂದಾಗ, ಅಲ್ಲಿ ಯಾರೂ ಕಾಣಲಿಲ್ಲ. ಹೀಗಾಗಿ ಅಲ್ಲಿದ್ದ ಇನ್ನೊಬ್ಬ ತರಬೇತುದಾರನನ್ನು ಪ್ರಶ್ನಿಸಿದ್ದಾರೆ. ಭಾನುವಾರ ಬೆಳಗ್ಗೆ 9 ರಿಂದ 11 ಗಂಟೆಯ ನಡುವೆ ಈ ಘಟನೆ ನಡೆದಿದೆ.

ತನ್ನ ಅನುಮಾನವನ್ನು ದೃಢಪಡಿಸಲು ಆಕೆ ಮ್ಯಾನೇಜರ್‌ಗೆ ದೂರು ನೀಡಿ, ಸಿಸಿಟಿವಿ ದೃಶ್ಯಾವಳಿ ಪರಿಶೀಲಿಸಿದ್ದಾರೆ. ಈ ವೇಳೆ ಆರೋಪಿಯು ಫೋಟೋ ತೆಗೆಯುವುದು ಕಂಡು ಬಂದಿದೆ. ಸಂತ್ರಸ್ತೆ ಐಟಿ ಉದ್ಯೋಗಿಯಾಗಿದ್ದು, ರಾಮಮೂರ್ತಿನಗರದ ಅಕ್ಷಯನಗರ ನಿವಾಸಿಯಾಗಿದ್ದಾರೆ. ತನ್ನ ಕುಟುಂಬವನ್ನು ಸಂಪರ್ಕಿಸಿದ ನಂತರ ಮಹಿಳೆ ಸೋಮವಾರ ತನ್ನ ಫಿಟ್‌ನೆಸ್ ಕೋಚ್ ಎಚ್‌ಎಸ್ ಸಿಬಿಯಾಚನ್ ವಿರುದ್ಧ ಪೊಲೀಸ್ ದೂರು ದಾಖಲಿಸಿದ್ದಾರೆ.

ಮಹಿಳೆ ಎರಡು ತಿಂಗಳ ಹಿಂದೆ ಬ್ಯಾಡ್ಮಿಂಟನ್ ಮತ್ತು ಈಜು ಕಲಿಯಲು ಫಿಟ್‌ನೆಸ್ ಸೆಂಟರ್‌ಗೆ ಸೇರಿದ್ದರು. ಭಾನುವಾರ ಬೆಳಗ್ಗೆ ಈಜು ತರಗತಿ ಮುಗಿಸಿ ಸ್ನಾನ ಮಾಡುತ್ತಿದ್ದಾಗ ಬಾತ್ರೂಮ್‌ನ ಕಿಟಕಿಯ ಮೂಲಕ ಯಾರೋ ಮೊಬೈಲ್‌ನಲ್ಲಿ ಫೋಟೋ ತೆಗೆಯುತ್ತಿರುವುದನ್ನು ನೋಡಿದ್ದಾರೆ. ತಕ್ಷಣ ಹೊರಗೆ ಬಂದರು, ಆದರೆ ಅಲ್ಲಿ ಯಾರೂ ಇರಲಿಲ್ಲ. ನಂತರ ಆಕೆ ಮ್ಯಾನೇಜರ್ ದೀಪಕ್ ಅವರನ್ನು ಸಂಪರ್ಕಿಸಿದರು ಮತ್ತು ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿದರು ಮತ್ತು ಆಕೆಯ ತರಬೇತುದಾರ ತನ್ನ ಛಾಯಾಚಿತ್ರಗಳನ್ನು ತೆಗೆದುಕೊಳ್ಳುವುದರ ಬಗ್ಗೆ ತಿಳಿಯಿತು ಎಂದು ಸಂತ್ರಸ್ತೆಯ ದೂರಿನಲ್ಲಿ ತಿಳಿಸಲಾಗಿದೆ.

ತರಬೇತುದಾರನನ್ನು ಬಂಧಿಸಲಾಗಿದೆ. ಈತ ಕೇರಳ ಮೂಲದವನು. ಆತನ ಮೊಬೈಲ್‌ನಿಂದ ಫೋಟೋ ಮತ್ತು ವೀಡಿಯೊಗಳನ್ನು ಅಳಿಸಿದ್ದಾರೆ ಎಂದು ವರದಿ ಮಾಡಿದ್ದರಿಂದ ಅವರ ಮೊಬೈಲ್ ಫೋನ್ ಅನ್ನು ವಶಪಡಿಸಿಕೊಂಡು ಡೇಟಾವನ್ನು ಹಿಂಪಡೆಯಲು ಎಫ್‌ಎಸ್‌ಎಲ್‌ಗೆ ಕಳುಹಿಸಲಾಗಿದೆ.

ಜಿಮ್‌ನ ಮ್ಯಾನೇಜರ್ ಮತ್ತು ಇತರ ತರಬೇತುದಾರರಿಗೆ ಆರೋಪಿ ವಿರುದ್ಧ ಈ ಹಿಂದೆ ಯಾವುದೇ ರೀತಿಯ ದೂರು ದಾಖಲಾಗಿದೆಯೆ ಎಂದು ಪರಿಶೀಲಿಸಲು ಸೂಚಿಸಲಾಗಿದೆ.

ಪ್ರಾಥಮಿಕ ತನಿಖೆಯ ಪ್ರಕಾರ ಆತ ಹವ್ಯಾಸಿ ಅಪರಾಧಿಯಲ್ಲ. ಮಹಿಳೆ ಗಂಭೀರ ಆರೋಪ ಮಾಡಿರುವ ಕಾರಣ ಆತನ ವಿರುದ್ಧ ಕ್ರಮ ಕೈಗೊಳ್ಳುವಂತೆ ಜಿಮ್ ಮ್ಯಾನೇಜ್‌ಮೆಂಟ್‌ಗೆ ಸೂಚಿಸಿದ್ದೇವೆ ಎಂದು ತನಿಖಾಧಿಕಾರಿಯೊಬ್ಬರು ತಿಳಿಸಿದ್ದಾರೆ.

ಆರೋಪಿಯ ವಿರುದ್ಧ ಭಾರತೀಯ ದಂಡ ಸಂಹಿತೆಯ (ಐಪಿಸಿ) ಸೆಕ್ಷನ್ 354 ಸಿ ಅಡಿಯಲ್ಲಿ ವೋಯರಿಸಂ ಪ್ರಕರಣವ ದಾಖಲಿಸಲಾಗಿದೆ. ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ನಿವೃತ್ತ ಸೇನಾಧಿಕಾರಿ ಹವಾಲ್ದಾರ್ ಗೆ ಡಾ.ಪುನೀತ್ ರಾಜಕುಮಾರ್ ಸೇವಾ ಪ್ರಶಸ್ತಿ

ಚನ್ನಮ್ಮನ ಕಿತ್ತೂರು: ತಾಲೂಕಿನ ತಿಗಡೊಳ್ಳಿ ಗ್ರಾಮ ವ್ಯಾಪ್ತಿಯಲ್ಲಿ ಗ್ರಾಮೀಣ ಯುವಕರ ಸೇನಾ ತರಬೇತಿ ಕೇಂದ್ರದ ಸ್ಥಾಪನೆ ಮಾಡುವ ಮೂಲಕ ನೂರಾರು ಯವಕರ ಬಾಳಿಗೆ ಬೆಳಕು ನೀಡಿದ ನಿವೃತ್ತ ಸೇನಾಧಿಕಾರಿ ಪರವೇಜ್ ಹವಾಲ್ದಾರ್ ಅವರಿಗೆ ಜಯ ಕರ್ನಾಟಕ ಸಂಘಟನೆ ಮೇಕಲಮರ್ಡಿ ಗ್ರಾಮ ಘಟಕದ ವತಿಯಿಂದ ನಡೆದ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಡಾ. ಪುನೀತ್ ರಾಜಕುಮಾರ್ ಸೇವಾ ಪ್ರಶಸ್ತಿಯನ್ನು ನೀಡಿ ಗೌರವಿಸಿದ್ದಾರೆ.

ನಿವೃತ್ತ ಸೇನಾಧಿಕಾರಿ ಪರವೀಜ್ ಹವಾಲ್ದಾರ್ ಅವರು ಗಂಡು ಮೆಟ್ಟಿನ ನಾಡು ಎಂದು ಪ್ರಸಿದ್ಧಿ ಪಡೆದ ವೀರ ರಾಣಿ ಕಿತ್ತೂರ ಚನ್ನಮ್ಮನ ನಾಡಿನಲ್ಲಿ ಯುವಕ ಯುವತಿಯರಿಗಾಗಿ ಸೇನಾ ತರಬೇತಿ ಸ್ಥಾಪನೆ ಮಾಡು ಮೂಲಕ ಸುಮಾರು 288 ಕ್ಕೂ ಹೆಚ್ಚು ಯುವಕ/ಯುವತಿಯರನ್ನ ಭಾರತೀಯ ಸೇನೆಗೆ ಸೇರಿಸುವಲ್ಲಿ ಶ್ರಮ ವಹಿಸಿದ್ದು ಸೇನೆಗೆ ಸೇರುವ ಅಭ್ಯರ್ಥಿಗಳಿಗೆ ತರಬೇತಿ ನೀಡುವುದರ ಜೊತೆಗೆ ಕನ್ನಡ ನಾಡು, ನುಡಿ, ನೆಲ, ಜಲ, ಸೇರಿದಂತೆ ಅನೇಕ ಸಮಾಜ ಪರ ಸೇವೆ ಮಾಡುತ್ತಾ ಬಂದಿದ್ದಾರೆ. ಅವರ ನಿರಂತರ ಸಮಾಜ ಸೇವೆಯನ್ನು ಪರಿಗಣಿಸಿ ಬೈಲಹೊಂಗಲ ತಾಲೂಕಿನ ಮೇಕಲಮರ್ಡಿ ಗ್ರಾಮದಲ್ಲಿ ಜಯ ಕರ್ನಾಟಕ ಸಂಘಟನೆ ವತಿಯಿಂದ ನಡೆದ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಈ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ನಿವೃತ್ತ ಸೇನಾಧಿಕಾರಿ ಪರವೇಜ್ ಹವಾಲ್ದಾರ್ ಅವರಿಗೆ ಡಾ.ಪುನೀತ್ ರಾಜಕುಮಾರ್ ಸೇವಾ ಪ್ರಶಸ್ತಿ ಲಬಿಸಿದ್ದಕ್ಕೆ ಅವರ ಸ್ನೇಹ ಬಳಗ, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಹರ್ಷವ್ಯಕ್ತ ಪಡಿಸಿದ್ದಾರೆ.

ಕರ್ನಾಟಕದ ಬಗ್ಗೆ ಕೇಂದ್ರಕ್ಕೆ ಕಾಳಜಿ ಇಲ್ಲ: ಸಚಿವ ಜಿ. ಪರಮೇಶ್ವರ್

ಮಧುಗಿರಿ: ಕರ್ನಾಟಕದ ಬಗ್ಗೆ ಕೇಂದ್ರ ಸರ್ಕಾರಕ್ಕೆ ಕಾಳಜಿ ಇಲ್ಲ ಎಂದು ಗೃಹ ಸಚಿವ ಜಿ. ಪರಮೇಶ್ವರ್ ಹೇಳಿದ್ದಾರೆ.

ಈ ಸಂಬಂಧ ಮಾತನಾಡಿದ ಅವರು,ಕೇಂದ್ರ ಸರ್ಕಾರ ರಾಜ್ಯದ ರೈತರ ಬಗ್ಗೆ ಮಲತಾಯಿ ಧೋರಣೆ ಅನುಸರಿಸುತ್ತಿದೆ. ಕೇಂದ್ರದ ಬರ ಅಧ್ಯಯನ ತಂಡ ರಾಜ್ಯದಲ್ಲಿ ಬರ ಪರಿಸ್ಥಿತಿ ಪರಿಶೀಲಿಸಿ ವರದಿ ನೀಡಿದ ನಂತರವೂ ಕೇಂದ್ರದಿಂದ ನಯಾಪೈಸೆ ಹಣ ಬಿಡುಗಡೆ ಮಾಡಿಲ್ಲ' ಎಂದರು.

ರಾಜ್ಯದ 223 ತಾಲ್ಲೂಕುಗಳನ್ನು ಬರಪೀಡಿತ ಎಂದು ರಾಜ್ಯ ಸರ್ಕಾರ ಘೋಷಿಸಿದೆ. ರಾಜ್ಯದ ರೈತರ ಕಷ್ಟಗಳಿಗೆ ಕೇಂದ್ರ ಸರ್ಕಾರ ಸ್ಪಂದಿಸುತ್ತಿಲ್ಲ. ರಾಜಕೀಯಕ್ಕಾಗಿ ಬಿಜೆಪಿ ಬರ ಅಧ್ಯಯನ ಮಾಡುತ್ತಿದೆ. ರಾಜ್ಯದಿಂದ ಆಯ್ಕೆಯಾಗಿರುವ ಬಿಜೆಪಿ ಸಂಸದರು ಹಣ ಕೊಡಿಸುವ ಕೆಲಸ ಮಾಡಬೇಕು ಎಂದರು.

ಶೇ. 75

ಮಕ್ಕಳ ಘನತೆಯ ಬದುಕು ಕುರಿತು ಪುಸ್ತಕ ಬಿಡುಗಡೆ

ಮಕ್ಕಳ ರಕ್ಷಣೆಯಲ್ಲಿ ಮಾಧ್ಯಮದ ಶಿಷ್ಟಾಚಾರದ ಬಗ್ಗೆ ವಿಶೇಷ ಕಾರ್ಯಾಗಾರ

ಬೆಳಗಾವಿ: ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲ ಪತ್ರಿಕಾ ಮಾಧ್ಯಮದವರು ಮಕ್ಕಳಿಗೆ ಸಂಬಂಧಿಸಿದಂತೆ ಯಾವುದೇ ಪ್ರಕರಣಗಳು ಗಮನಕ್ಕೆ ಬಂದಲ್ಲಿ ತಕ್ಷಣವೆ ಮಾಹಿತಿಯನ್ನು ನಿರ್ಲಕ್ಷ ಮಾಡದೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಬೇಕು.

ಅದರಂತೆ ತಾವು ವರದಿ ಮಾಡುವ ಸಂದರ್ಭದಲ್ಲಿ ಪತ್ರಿಕೆಯಲ್ಲಿ ಯಾವ ಪದ ಬಳಕೆ ಮಾಡಬೇಕು ಎಂಬುವುದು ಮಕ್ಕಳ ಘನತೆ ಪುಸ್ತಕದಲ್ಲಿ ಮಾಹಿತಿ ಲಭ್ಯವಿರುತ್ತದೆ ಆದ್ದರಿಂದ ಪುಸ್ತಕವನ್ನು ಓದಿ ತಿಳಿದುಕೊಳ್ಳಬೇಕು ಎಂದು ಜಿಲ್ಲಾ ಕಾನೂನೂ ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪಿ. ಮುರಳಿ ಮೋಹನ ರೆಡ್ಡಿ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಕಾನೂನೂ ಸೇವೆಗಳ ಪ್ರಾಧಿಕಾರ ಹಾಗೂ ಬೆಳಗಾವಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ನಗರದ ವಾರ್ತಾ ಭವನದಲ್ಲಿ ಗುರುವಾರ (ನ.09) ನಡೆದ ಮಕ್ಕಳ ಘನತೆಯ ಬದುಕು ಕುರಿತು ಪುಸ್ತಕ ಬಿಡುಗಡೆ ಹಾಗೂ ಮಕ್ಕಳ ರಕ್ಷಣೆಯಲ್ಲಿ ಮಾಧ್ಯಮದ ಶಿಷ್ಟಾಚಾರ ಬಗ್ಗೆ ವಿಶೇಷ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.

"ಮಕ್ಕಳ ಘನತೆಯ ಬದುಕು" ಪುಸ್ತಕದಲ್ಲಿರುವ ಕೆಲವು ಅಂಶಗಳನ್ನು ತಿಳಿಸುತ್ತಾ ಬಾಲ ನ್ಯಾಯ ಕಾಯ್ದೆ 2015ರ (ಮಕ್ಕಳ ಪೋಷಣೆ ಮತ್ತು ರಕ್ಷಣೆ) ಅನ್ವಯ ಸೆಕ್ಷನ್ 74ರ ಪ್ರಕಾರ ಮಕ್ಕಳ ವೈಯಕ್ತಿಕ ಮಾಹಿತಿ ಹಾಗೂ ಮಗುವಿನ ಭಾವಚಿತ್ರ, ಮಗುವಿನ ವಿಳಾಸ, ಗುರುತನ್ನು ಬಹಿರಂಗಪಡಿಸುವಂತಿಲ್ಲ. ಒಂದು ವೇಳೆ ಬಹಿರಂಗಪಡಿಸಿದ್ದಲ್ಲಿ ಶಿಕ್ಷೆ ಮತ್ತು ವರೆಗೆ ದಂಡ ವಿಧಿಸಬಹುದು ಎಂದು ಹೇಳಿದರು.

ಮಕ್ಕಳ ರಕ್ಷಣೆಗೆ ಸಂಬಂಧಿಸಿದಂತೆ ಯಾವುದೆ ಮಾಹಿತಿ ತಮಗೆ ಬಂದಲ್ಲಿ ತಾವು ಹೆಚ್ಚು ಹೆಚ್ಚಾಗಿ ಪ್ರಚಾರ ಮಾಡವುದು ಅತ್ಯುನ್ನತ ಕಾರ್ಯವಾಗಿದೆ ಎಂದರು.

ಅದೇ ರೀತಿಯಲ್ಲಿ ಜಿಲ್ಲಾ ಕಾನುನು ಸೇವೆಗಳ ಪ್ರಾಧಿಕಾರದ ಸೌಲಭ್ಯಗಳ ಕುರಿತು ಜಿಲ್ಲಾ ಕಾನೂನೂ ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ

ಪಿ. ಮುರಳಿ ಮೋಹನ ರೆಡ್ಡಿ ಅವರು ತಿಳಿಸಿದರು.

ಇದೇ ವೇಳೆ ಮಾತನಾಡಿದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತೇಶ ಭಜಂತ್ರಿ ಅವರು ಯಾವುದೇ 18 ವರ್ಷದ ಒಳಗಿನ ಮಕ್ಕಳು ಕಾನೂನಿನೊಂದಿಗೆ ಸಂಘರ್ಷಕ್ಕೊಳಗಾದಾಗ ಆ ಮಗುವಿಗೆ ಬಾಲಾಪರಾಧಿ ಎಂಬ ಶಬ್ದವನ್ನು ಬಳಸುವಂತಿಲ್ಲ. ಬದಲಾಗಿ ಕಾನೂನಿನೊಂದಿಗೆ ಸಂಘರ್ಷದಲ್ಲಿರುವ ಮಗು ಎಂದು ಬಳಸಬೇಕು. ಹಾಗೂ ಮಕ್ಕಳ ನ್ಯಾಯ ಮಂಡಳಿಯಲ್ಲಿ ಮಗುವಿನ ತನಿಖೆ ನಡೆಸುತ್ತಿರುವ ಸಂದರ್ಭದಲ್ಲಿ ಮಗುವನ್ನು ದಾಖಲಿಸುವ ಕೇಂದ್ರವನ್ನು ರಿಮ್ಯಾಂಡ ಹೋಮ್ ಎಂಬ ಶಬ್ದವನ್ನು ಬಳಸದೆ ವೀಕ್ಷಣಾಲಯ **(observation home)** ಎಂಬ ಪದ ಬಳಸಬೇಕು ಎಂದು ತಿಳಿಸಿದರು.

ಅದರಂತೆ 18 ವರ್ಷ ಒಳಗಿನ ಮಕ್ಕಳ ಲೈಂಗಿಕ ಹಲ್ಲೆ ಪ್ರಕರಣದ ಸಂದರ್ಭದಲ್ಲಿ ಅತ್ಯಾಚಾರ ಎಂಬ ಪದ ಬಳಕೆ ಮಾಡದೆ ಲೈಂಗಿಕ ಹಲ್ಲೆ, ದೈಹಿಕ ಹಿಂಸೆ, ಕಿರುಕುಳ ಅಥವಾ ಶೋಷಣೆ ಎಂಬ ಪದ ಬಳಕೆ ಮಾಡಬೇಕು ಎಂದರು.

ದೇಶದಲ್ಲಿ ಒಟ್ಟು ಸುಮಾರು 40% ಮಕ್ಕಳಿದ್ದು ಅಂತಹ ಮಕ್ಕಳ ಮೂಲಭೂತ ಹಕ್ಕುಗಳು ಹಾಗೂ ಸೌಲಭ್ಯಗಳು ಸರಿಯಾಗಿ ಸಿಗುವಂತಾಗಬೇಕು. ದೇಶದ ಮುಂದಿನ ಭವಿಷ್ಯವಾದ ಮಕ್ಕಳ ಕುರಿತಾದ ಲೇಖನಗಳು, ಪತ್ರಿಕಾ ವರದಿಗಳು, ಕಥೆ ಕಾದಂಬರಿಗಳು, ಮಕ್ಕಳ ಸ್ನೇಹಿಯಾಗಿದ್ದು ಹೆಚ್ಚೆಚ್ಚು ಪ್ರಸಾರಗೊಳಿಸಲು ಎಲ್ಲ ಪತ್ರಿಕಾ ಮಾಧ್ಯಮದವರ ಮುಂದೆ ವಿನಂತಿಸಿದರು.

ಮಕ್ಕಳ ರಕ್ಷಣೆಯಲ್ಲಿ ಮಾಧ್ಯಮಗಳ ಪಾತ್ರ ಹಾಗೂ ಮಕ್ಕಳ ಹಕ್ಕುಗಳನ್ನು ಕಾಪಾಡಲು ಮತ್ತು ಮಕ್ಕಳ ಘನತೆಯನ್ನು ಎತ್ತಿ ಹಿಡಿಯಲು ಮಕ್ಕಳ ಪ್ರಕರಣದ ಕುರಿತು ವರದಿ ಮಾಡುವಾಗ ಅನುಸರಿಸಬೇಕಾದ ನಿಯಮಗಳ ಕುರಿತು ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾರ್ಯ ವ್ಯಾಪ್ತಿ ಹಾಗೂ ಘಟಕದ ವಿವಿಧ ಕಾರ್ಯಕ್ರಮಗಳ ಕುರಿತು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತೇಶ ಭಜಂತ್ರಿ ಅವರು ವಿವರಿಸಿದರು.

ಪುಸ್ತಕ ಬಿಡುಗಡೆ:

ಇದಕ್ಕೂ ಮುಂಚೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪಿ. ಮುರಳಿ ಮೋಹನ್ ರೆಡ್ಡಿ ಅವರು "ಮಕ್ಕಳ ಘನತೆಯ ಬದುಕು" ಕುರಿತು ಪುಸ್ತಕ ಬಿಡುಗಡೆ ಮಾಡಿದರು.

ಕಾರ್ಯಾಗಾರದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಉಪನಿರ್ದೇಶಕ ಗುರುನಾಥ ಕಡಬೂರ, ಪ್ರಜಾವಾಣಿ ಜಿಲ್ಲಾ ವರದಿಗಾರ ಸಂತೋಷ ಚಿನಗುಡಿ, ಡೆಕ್ಕನ್ ಹೆರಾಲ್ಡ್ ಪತ್ರಿಕೆ ವರದಿಗಾರ ರಾಜು ಗವಳಿ, ಟೈಮ್ಸ್ ಆಫ್ ಇಂಡಿಯಾ ವರದಿಗಾರ ರವಿ ಉಪ್ಪಾರ ಹಾಗೂ ಬೆಳಗಾವಿ ವರದಿ ದಿನಪತ್ರಿಕೆ ಸಂಪಾದಕರು ಸತೀಶ್ ಗುಡಗೇನಟ್ಟಿ ಸೇರಿದಂತೆ ವಿವಿಧ ಪತ್ರಿಕಾ ಮಾಧ್ಯಮದ ಪ್ರತಿನಿಧಿಗಳು ಪಾಲ್ಗೊಂಡಿದ್ದರು ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ/ಮಕ್ಕಳ ಸಹಾಯವಾಣಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಉಡಕೇರಿಯಲ್ಲಿ ಬಸವೇಶ್ವರರ ಕಂಚಿನ ಮೂರ್ತಿ ವಾರ್ಷಿಕೋತ್ಸವ

ಬಸವಾದಿ ಶರಣರ ತತ್ವಗಳು ಸರ್ವಕಾಲಿಕ: ತೋಂಟದ ಶ್ರೀಗಳು

ಬೈಲಹೊಂಗಲ: ತಾಲೂಕಿನ ಉಡಕೇರಿ ಗ್ರಾಮದಲ್ಲಿ ವಿಶ್ವಗುರು ಶ್ರೀ ಬಸವೇಶ್ವರರ ಅಶ್ವಾರೂಢ ಕಂಚಿನ ಮೂರ್ತಿ ಪ್ರತಿಷ್ಠಾಪನೆಯ ಐದನೇ ವರ್ಷದ ವಾರ್ಷಿಕೋತ್ಸವದ ಸಮಾರಂಭವು ಸಡಗರ–ಸಂಭ್ರಮದಿಂದ ಗುರುವಾರ ಜರುಗಿತು.

ಗದಗ–ಡಂಬಳದ ಡಾ.ತೋಂಟದ ಸಿದ್ದರಾಮ ಸ್ವಾಮೀಜಿ ಅವರು ಶ್ರೀ ಬಸವೇಶ್ವರ ಕಂಚಿನ ಪುತ್ಥಳಿಗೆ ಮಾಲಾರ್ಪಣೆಗೈದು ಪೂಜೆ ಸಲ್ಲಿಸಿ ಮಾತನಾಡಿ, ವಿಶ್ವ ಮಾನ್ಯವಾಗಿರುವ ಬಸವೇಶ್ವರರ ಸಂದೇಶಗಳು ಸರ್ವಕಾಲಿಕವಾಗಿವೆ.

ವಚನಗಳ ಸಾರ ನಿತ್ಯ ಜೊತೆಯಲ್ಲಿದ್ದರೆ ಜೀವನ ಪಾವನವಾಗಲಿದ್ದು ಪೋಷಕರು ಮಕ್ಕಳಿಗೆ ಸದಾ ಸಂಪ್ರದಾಯ ಸಂಸ್ಕಾರ ಕಲಿಸಿ ಜಾಗೃತ ಮಾಡಬೇಕೆಂದರು.

ಮುಖ್ಯ ಅತಿಥಿಗಳಾದ ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷ ಬಸವರಾಜ ರೊಟ್ಟಿ ಮಾತನಾಡಿ, 12 ನೇ ಶತಮಾನದಲ್ಲಿ ಸಮಾನತೆ ಸಂದೇಶ ಸಾರಿದ ಶರಣರನ್ನು ಪ್ರತಿಯೊಬ್ಬರು ಆರಾಧಿಸುವ ನಿಟ್ಟಿನಲ್ಲಿ ನಾಡಿನ ಪ್ರತಿಯೊಂದು ಗ್ರಾಮಗಳಲ್ಲಿ ಶ್ರೀ ಬಸವೇಶ್ವರರ ಅಶ್ವಾರೂಢ ಮೂರ್ತಿ ಪ್ರತಿಷ್ಠಾಪಣೆಯಾಗಬೇಕು.

ಬಸವ ಪರ ಸಂಘಟಣೆಗಳಿಗೆ ಪ್ರೋತ್ಸಾಹ ನೀಡಿ ಆ ಮೂಲಕ ಜನ ಜಾಗೃತಿಯಾಗಬೇಕೆಂದರು.

ಗ್ರಾಮದ ನಾಗರಿಕರಿಂದ ಶ್ರೀ ಬಸವೇಶ್ವರರ ಭಾವಚಿತ್ರ ಹಾಗೂ ಶರಣೆಯರಿಂದ ವಚನ

ಸಾಹಿತ್ಯ ಮೆರವಣಿಗೆ ಅದ್ದೂರಿಯಾಗಿ ಜರುಗಿತು. ಕದಳಿ ಮಹಿಳಾ ವೇದಿಕೆಯ ಜಿಲ್ಲಾಧ್ಯಕ್ಷೆ ಪೇಮಾ ಅಂಗಡಿ ಬಸವಾದಿ ಶರಣರ ಕುರಿತು ಉಪನ್ಯಾಸ ನೀಡಿದರು. ನಂತರ ಮಹಾಪ್ರಸಾದ ನಡೆಯಿತು.

ಸುಪ್ರಭಾತ ಸಮಯದಲ್ಲಿ ತೋಂಟದ ಡಾ.ಸಿದ್ದರಾಮ ಸ್ವಾಮೀಜಿ ಅವರಿಂದ ಇಷ್ಟಲಿಂಗ ಪೂಜೆ, ಮಕ್ಕಳಿಗೆ ಲಿಂಗದೀಕ್ಷೆ ಕಾರ್ಯಕ್ರಮ ಭಕ್ತಿ–ಭಾವಗಳಿಂದ ನಡೆಯಿತು. ಶ್ರೀ ರಾಮಲಿಂಗೇಶ್ವರ ಪ್ರೌಢಶಾಲೆಯ ಅಧ್ಯಕ್ಷ ರಾಜು ಬೋಳಶೆಟ್ಟಿ ಅವರು ಮುಂಜಾನೆ ಷಟಸ್ಥಳ ಧ್ವಜಾರೋಹನ ನೆರವೇರಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಚಂದ್ರು ಮೇಟ್ಯಾಳ ಸ್ವಾಗತಿಸಿದರು. ಉಮೇಶ ಹಿತ್ತಲಮನಿ ನಿರೂಪಿಸಿದರು. ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ಸಹಾಯಧನ ನೋಂದಣಿಗೆ ಅರ್ಜಿ ಆಹ್ವಾನ

ಶಿವಮೊಗ್ಗ: 2023–24ನೇ ಸಾಲಿನ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಹನಿ ನೀರಾವರಿ ಕಾರ್ಯಕ್ರಮ, ಎಸ್ಎಂಎಎಂ ಯೋಜನೆಯಡಿ ತೋಟಗಾರಿಕೆಯಲ್ಲಿ ಯಾಂತ್ರೀಕರಣ ಕಾರ್ಯಕ್ರಮಗಳಡಿ ಸಹಾಯಧನ ನೊಂದಣಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಆಸಕ್ತ ರೈತರು ನ.16 ರಿಂದ 24ನೇ ತಾರೀಖಿನೊಳಗೆ ಅರ್ಜಿ ಸಲ್ಲಿಸಿ ನೋಂದಣಿ ಮಾಡಿಕೊಳ್ಳಬಹುದಾಗಿರುತ್ತದೆ. ಹನಿ ನೀರಾವರಿ ಕಾರ್ಯಕ್ರಮದಡಿ 5 ಹೆಕ್ಟೇರ್ವರೆಗೆ ಸಹಾಯಧನ ನೀಡಲು ಅವಕಾಶವಿರುತ್ತದೆ. ತೋಟಗಾರಿಕೆಯಲ್ಲಿ ಯಾಂತ್ರೀಕರಣ ಕಾರ್ಯಕ್ರಮದಡಿ ಪ್ರಥಮ ಆದ್ಯತೆಯಲ್ಲಿ ಅಡಿಕೆ ದೋಟಿಯನ್ನು ಪರಿಗಣಿಸಲಾಗುವುದು. ತೀರ್ಥಹಳ್ಳಿ ತಾಲ್ಲೂಕಿಗೆ ಲಭ್ಯವಾಗುವ ಅನುದಾನ, ಮೀಸಲಾತಿ ನಿಯಮಾವಳಿ ಮತ್ತು ಯೋಜನೆಯ ಮಾರ್ಗಸೂಚಿಯನ್ವಯ ಜೇಷ್ಠತೆ ಅರ್ಜಿಗಳನ್ನು ಕಾರ್ಯಾದೇಶ ನೀಡುವ ಮುಂದಿನ ಕ್ರಮಗಳಿಗಾಗಿ ಪರಿಗಣಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕುಶಾವತಿಯಲ್ಲಿನ ತೋಟಗಾರಿಕೆ ಇಲಾಖಾ ಕಚೇರಿಯನ್ನು ಸಂಪರ್ಕಿಸಬಹುದು ಅಥವಾ ಹೋಬಳಿವಾರು ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಬಹುದೆಂದು ತೀರ್ಥಹಳ್ಳಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ ವೀರರಾಣಿ ಒನಕೆ ಓಬವ್ವ ಜಯಂತಿ

ಶಿವಮೊಗ್ಗ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಛಲವಾದಿ ಮಹಾಸಭಾ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ನ.11 ರಂದು ಬೆಳಗ್ಗೆ 11 ಗಂಟೆಗೆ ನಗರದ ಕುವೆಂಪು ರಂಗಮಂದಿರದಲ್ಲಿ ವೀರರಾಣಿ ಒನಕೆ ಓಬವ್ವ ಜಯಂತಿಯನ್ನು ಏರ್ಪಡಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಮಧುಬಂಗಾರಪ್ಪ ನೆರೆವೇರಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರಾದ ತಂಗಡಗಿ ಶಿವರಾಜ್ ಸಂಗಪ್ಪ ಹಾಗೂ ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು, ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾದ ಡಿ.ಸುಧಾಕರ್ ಆಗಮಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಿವಮೊಗ್ಗ ನಗರ ಕ್ಷೇತ್ರ ಶಾಸಕರಾದ ಎಸ್.ಎಸ್ ಚನ್ನಬಸಪ್ಪ ವಹಿಸಲಿದ್ದಾರೆ.

ಸಂಸದರು, ವಿಧಾನ ಸಭಾ/ವಿಧಾನ ಪರಿಷತ್ ಶಾಸಕರು, ಮಹಾನಗರಪಾಲಿಕೆ ಮಹಾಪೌರರು, ಜನಪ್ರತಿನಿಧಿಗಳು, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಕುವೆಂಪು ವಿಶ್ವವಿದ್ಯಾಲಯದ ಡಾ.ಬಿ.ಆರ್ ಅಂಬೇಡ್ಕರ್ ಅಧ್ಯಯಧನ ಕೇಂದ್ರದ ನಿರ್ದೇಶಕರಾದ ಡಾ.ನೆಲ್ಲಿಕಟ್ಟೆ.ಎಸ್.ಸಿದ್ದೇಶ್ ಇವರು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ರಾಷ್ಟ್ರೀಯ ಆಯುರ್ವೇದ ದಿನ–2023 ನಿಮಿತ್ಯ ಬೃಹತ್ ಉಚಿತ ತಪಾಸಣೆ ಶಿಬಿರ

ಬೆಳಗಾವಿ: ಕೆ.ಎಲ್.ಇ. ಆಯುರ್ವೇದ ಆಸ್ಪತ್ರೆ ಶಹಾಪೂರ ಬೆಳಗಾವಿಯಲ್ಲಿ ರಾಷ್ಟ್ರೀಯ ಆಯುರ್ವೇದ ದಿನ–2023 ರ ನಿಮಿತ್ಯ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸುತ್ತಿದೆ.

ಈ ನಿಟ್ಟಿನಲ್ಲಿ ಎಲ್ಲಾ OPD ಗಳು/ ವಿಶೇಷ ಘಟಕಗಳಲ್ಲಿ ಉಚಿತ ತಪಾಸಣೆ ಯನ್ನುದಿನಾಂಕ: 10/11/2023 ರಂದು ಮುಂಜಾನೆ 09.00 ರಿಂದ 1.30 ರವರೆಗೆ ಹಾಗೂ ಮಧ್ಯಾನ್ಹ 02.30 ರಿಂದ 05.00 ರವರೆಗೆ ಕೈಗೊಳ್ಳಲಾಗುತ್ತಿದೆ.

ಶಿಬಿರದಲ್ಲಿ ನರ ವೈಜ್ಞಾನಿಕ ಅಸ್ವಸ್ಥತೆಗಳು, ಪುರುಷ ಮತ್ತು ಸ್ತ್ರೀಬಂಜೆತನ, ಕಣ್ಣು, ಇಎನ್‌ಟಿ, ಚರ್ಮರೋಗ, ಪೈಲ್ಸ್, ಸ್ತ್ರೀರೋಗ ಸಮಸ್ಯೆಗಳು, ಮಕ್ಕಳ ಆರೋಗ್ಯ ಸಮಸ್ಯೆಗಳು, ಮಾನಸಿಕ ಅಸ್ವಸ್ಥತೆಗಳು ಥೈರಾಯ್ಡ್, ಮಧುಮೇಹ, ಹೃದ್ರೋಗ, ಲೈಂಗಿಕ ಸಮಸ್ಯೆಗಳು, ವಯೋಸಹಜ ಸಮಸ್ಯೆಗಳು ಮುಂತಾದ ವಿವಿಧರೋಗಗಳು ಇತ್ಯಾದಿಗಳಿಗೆ ಸಂಬಂಧಿಸಿದಂತೆ ತಪಾಸಣೆ ಮಾಡಲಾಗುವುದು.

ಅರಣ್ಯ ಭೂಮಿ ಸಕ್ರಮಗೊಳಿಸಲು ಉಪವಿಭಾಗಾಧಿಕಾರಿಗೆ ಮನವಿ

ಬೈಲಹೊಂಗಲ: ಸವದತ್ತಿ ತಾಲೂಕಿನ ಆಡಳಿತಕ್ಕೆ ಒಳಪಡುವ ಬೈಲಹೊಂಗಲ ಮತಕ್ಷೇತ್ರದ ರುದ್ರಾಪೂರ ತಾಂಡಾ, ರಾಮಾಪೂರ ತಾಂಡಾದ ಜನರು ಸಾಗುವಳಿ ಮಾಡುತ್ತಿರುವ ಅರಣ್ಯ ಭೂಮಿಯನ್ನು ಸಕ್ರಮಗೊಳಿಸಿ ಹಕ್ಕು ಪತ್ರ ನೀಡಬೇಕೆಂದು ಆಗ್ರಹಿಸಿ ತಾಂಡಾದ ನಾಗರಿಕರು ಈಚೆಗೆ ಉಪವಿಭಾಗಾಧಿಕಾರಿ ಪ್ರಭಾವತಿ ಪಕ್ಕೀರಪೂರ ಅವರಿಗೆ ಮನವಿ ಸಲ್ಲಿಸಿದರು.

06–03–1928 ರಿಂದ ಮುರಗೋಡ ಬ್ಲಾಕ್ ಸರ್ವೆ ನಂಬರಗಳಲ್ಲಿನ ಜಮೀನುಗಳನ್ನು ಸುಮಾರು 95 ವರ್ಷಗಳಿಂದ ಈ ಅರಣ್ಯ ಜಮೀನನ್ನೇ ನಂಬಿ ಸಾಗುವಳಿ ಮಾಡುತ್ತಾ ಬಂದಿದ್ದೇವೆ. ಸದರಿ ಜಮೀನುಗಳ ಪಾರೆಸ್ಟ ಸರ್ವೆ ನಂ. 514/540/542/535/543 ರಲ್ಲಿ 200 ಕುಟುಂಬಗಳು ನಂಬಿ ಜೀವಿಸುತ್ತಿವೆ.

ಸದ್ಯ ಅರಣ್ಯ ಭೂಮಿ ಅಂತಾ ನಮೂದ ಆಗಿರುವದರಿಂದ ಸರಕಾರದಿಂದ ಸಿಗಬೇಕಾದ ಸೌಲತ್ತುಗಳು ತಾಂಡಾ ಜನರಿಗೆ ಮರೀಚಿಕೆಯಾಗಿವೆ. ತಾಂಡಾದಲ್ಲಿ ವಾಸಿಸುತ್ತಿರುವ ಜನರು ಹೆಚ್ಚಾಗಿ ಪರಿಶಿಷ್ಟ ಜಾತಿಗೆ ಸೇರಿದವರಾಗಿದ್ದು ಕಾರಣ ಸದರಿ ಜಮೀನನ್ನು ಕೂಡಲೇ ಸಕ್ರಮಗೊಳಿಸಿ ಕರ್ನಾಟಕ ಅರಣ್ಯ ಸಮಿತಿ ಕಾನೂನು 2006 ರ ಅನ್ವಯ ಹಕ್ಕು ಪತ್ರ ನೀಡಲು ಕ್ರಮ ಕೈಗೊಳ್ಳಬೇಕೆಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಮುಖಂಡರಾದ ರಾಮಪ್ಪ ಕಾರಬಾರಿ, ಬಿ.ವಾಯ್.ನಾಯ್ಕ, ಪೀರಪ್ಪ ಲಮಾಣಿ, ಶಂಕರ ಲಮಾಣಿ, ಶಿವಪ್ಪ ಲಮಾಣಿ, ಸುನೀಲ ಲಮಾಣಿ ಸೇರಿದಂತೆ ಅನೇಕರ ಉಪಸ್ಥಿತರಿದ್ದರು.

ಮಾಜಿ ಸೈನಿಕರ ಸಂಘದ ನೂತನ ಪದಾಧಿಕಾರಿಗಳ ಆಯ್ಕೆ

ಬೈಲಹೊಂಗಲ: ಪಟ್ಟಣದ ಚೆನ್ನಮ್ಮ ಉಪ ನಗರದಲ್ಲಿರುವ ಶ್ರೀ ದಾನಮ್ಮ ದೇವಿ ದೇವಸ್ಥಾನದಲ್ಲಿ ಗುರುವಾರ ಮಾಜಿ ಸೈನಿಕರ ಸಂಘದ ನೂತನ ಪದಾಧಿಕಾರಿಗಳ ಆಯ್ಕೆ ಜರುಗಿತು ದೇವಸ್ಥಾನದಲ್ಲಿ ಸಭೆ ಸೇರಿ ತಾಲೂಕಿನ ನೂರಾರು ಮಾಜಿ ಸೈನಿಕರ ಅಭಿಪ್ರಾಯ ಮೇರೆಗೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ನೂತನ ಅಧ್ಯಕ್ಷರಾಗಿ ಬಿ ಬಿ ಬೋಗೂರ, ಉಪಾಧ್ಯಕ್ಷರಾಗಿ ಚಂದ್ರಶೇಖರ ನೇಸರಗಿ, ಕಾರ್ಯದರ್ಶಿಯಾಗಿ ಸಿದ್ದಲಿಂಗಯ್ಯ ಮರಕುಂಬಿಮಠ, ಖಜಾಂಚಿಯಾಗಿ ದೇಮಪ್ಪ ಶಿರಗಾಂವಿ ಆಯ್ಕೆಯಾದರು.

ಈ ಸಂದರ್ಭದಲ್ಲಿ 150 ಕ್ಕೂ ಹೆಚ್ಚು ಮಾಜಿ ಸೈನಿಕರು ಇದ್ದರು. ಮುಂಬರುವ ದಿನಗಳಲ್ಲಿ ಸಂಘವನ್ನು ಮತ್ತಷ್ಟು ಬಲಪಡಿಸುವ ಹಾಗೂ ವಿವಿಧ ಯೋಜನೆಗಳ ಅನುಷ್ಠಾನ ಕುರಿತು ಚರ್ಚಿಸಲಾಯಿತು.

ಹುಬ್ಬಳ್ಳಿ, ಧಾರವಾಡದಲ್ಲಿ ವೃತ್ತಿಪರರ ನೇಮಕಾತಿ ಅಭಿಯಾನ

ಹುಬ್ಬಳ್ಳಿ: [24]7.ai ಉದ್ದೇಶ–ಚಾಲಿತ ಗ್ರಾಹಕ ಪರಿಹಾರಗಳು ಮತ್ತು ಸಂಪರ್ಕ ಕೇಂದ್ರ ಸೇವೆಗಳಲ್ಲಿ ಜಾಗತಿಕ ನಾಯಕರಾದ ಚಿಟ, ಕಂಪನಿಯು ವಾಯ್ಸ್ ಮತ್ತು chat ಸೇವೆಗಳಿಗೆ ಕಸ್ಟಮರ್ ಸಪೋರ

ಬೆಳಗಾವಿ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆ

ಬರ ನಿರ್ವಹಣೆ, ಕುಡಿಯುವ ನೀರು ಪೂರೈಕೆ; ನರೇಗಾ ಸಮರ್ಪಕ ಅನುಷ್ಠಾನಕ್ಕೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಂಜುಂ ಪರ್ವೇಜ್ ಕಟ್ಟುನಿಟ್ಟಿನ ಸೂಚನೆ

ಬೆಳಗಾವಿ: ಜಿಲ್ಲೆಯ ಎಲ್ಲ ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಿರುವುದರಿಂದ ನಗರ–ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು ಪೂರೈಕೆ, ನರೇಗಾ ಯೋಜನೆಯಡಿ ಎಲ್ಲರಿಗೂ ಉದ್ಯೋಗ ಹಾಗೂ ಜಾನುವಾರುಗಳಿಗೆ ಮೇವು ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಅಂಜುಂ ಪರ್ವೇಜ್ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಗುರುವಾರ (ನ.9) ನಡೆದ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಯಾವುದೇ ನಗರ ಅಥವಾ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಾರದು. ಒಂದು ವೇಳೆ ಸಮಸ್ಯೆ ಕಂಡುಬಂದರೆ ಸಂಬಂಧಿಸಿದ ಅಧಿಕಾರಿಗಳನ್ನು ಹೊಣೆ ಮಾಡಲಾಗುವುದು.

ಈಗಲೇ ಸಮಯಾವಕಾಶ ಇರುವುದರಿಂದ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಸೂಕ್ತ ಯೋಜನೆಯನ್ನು ಸಿದ್ಧಪಡಿಸಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಗ್ರಾಮೀಣ ಪ್ರದೇಶಗಳಲ್ಲಿ ಅರ್ಹ ಪ್ರತಿಯೊಬ್ಬರಿಗೂ ನರೇಗಾ ಯೋಜನೆಯಡಿ ಕೆಲಸ ನೀಡಬೇಕು. ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ಮಾಡಿದ ಪ್ರತಿಯೊಬ್ಬರಿಗೂ ಸಕಾಲದಲ್ಲಿ ಕೂಲಿ ಜಮೆಯಾಗಬೇಕು ಎಂದು ತಿಳಿಸಿದರು.

ಮಳೆ ಕೊರತೆಯಾಗಿರುವುದರಿಂದ ಮುಂಬರುವ ದಿನಗಳಲ್ಲಿ ಬೆಳಗಾವಿ ನಗರಕ್ಕೆ ಕುಡಿಯುವ ನೀರಿನ ಸಮಸ್ಯೆ ಎದುರಾದರೆ ಅದನ್ನು ನಿವಾರಿಸಲು ಸೂಕ್ತ ಸಿದ್ಧತೆ ಮಾಡಿಕೊಳ್ಳಬೇಕು.

ನಿರಂತರ ನೀರು(24*7) ಕಾಮಗಾರಿ ಚುರುಕುಗೊಳಿಸಲು ಸೂಚನೆ:

ಬೆಳಗಾವಿ ನಗರದಲ್ಲಿಯ ನಡೆಯುತ್ತಿರುವ ನಿರಂತರ ನೀರು(24*7) ಪೂರೈಕೆ ಯೋಜನೆಯ ಕಾಮಗಾರಿಯನ್ನು ಚುರುಕುಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಂಜುಂ ಪರ್ವೇಜ್ ಅವರು ನಿರ್ದೇಶನ ನೀಡಿದರು.

ಈ ಯೋಜನೆ ಬೇಗ ಪೂರ್ಣಗೊಂಡರೆ ನಾಗರಿಕರಿಗೆ ಅನುಕೂಲವಾಗಲಿದೆ. ಆದ್ದರಿಂದ ಕಾಮಗಾರಿ ಚುರುಕುಗೊಳಿಸಬೇಕು ಎಂದರು.

ನಗರದಲ್ಲಿರುವ ಕೊಳವೆಬಾವಿಯ ನೀರಿನ ಗುಣಮಟ್ಟ ಪರಿಶೀಲಿಸಬೇಕು. ಪ್ರತಿಯೊಂದು ಕೊಳವೆಬಾವಿಗಳಿಗೆ ಕ್ರಮಸಂಖ್ಯೆಗಳನ್ನು ನೀಡಬೇಕು. ನಗರದಲ್ಲಿರುವ ಕೊಳವೆಬಾವಿಗಳ ದುರಸ್ತಿಗೆ ಆದ್ಯತೆ ನೀಡಬೇಕು.

ಬರ ನಿರ್ವಹಣೆಗೆ ಸರಕಾರದಿಂದ

ಬಿಡುಗಡೆಯಾಗಿರುವ ಅನುದಾನದಲ್ಲಿ ಯಾವುದೇ ಕಾರಣಕ್ಕೂ ಹೊಸ ಕೊಳವೆಬಾವಿಗಳನ್ನು ಕೊರೆಯಬಾರದು. ಆದರೆ ಈಗಾಗಲೇ ಇರುವ ಕೊಳವೆಬಾವಿಗಳ ದುರಸ್ತಿಗೆ ಕ್ರಮ ಕೈಗೊಳ್ಳಬೇಕು.

ಗೃಹಲಕ್ಷ್ಮೀ ಯೋಜನೆಯಡಿ ನೋಂದಣಿಯಾಗಿರುವ ಫಲಾನುಭವಿಗಳಿಗೆ ಹಣ ಬಿಡುಗಡೆಗೆ ಅಡ್ಡಿಯಾಗಿರುವ ತಾಂತ್ರಿಕ ತೊಂದರೆಗಳನ್ನು ಕೂಡಲೇ ನಿವಾರಿಸಬೇಕು.

ಜಿಲ್ಲೆಯಲ್ಲಿ ಬಾಕಿ ಇರುವ 7 ಸಾವಿರ ಫಲಾನುಭವಿಗಳ ಖಾತೆಗೆ ಹಣ ಜಮಾ ಮಾಡಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದರು.

ಗೃಹಲಕ್ಷ್ಮೀ ಯೋಜನೆ, ಗೃಹಜ್ಯೋತಿ ಹಾಗೂ ಶಕ್ತಿ ಯೋಜನೆಗಳ ಪ್ರಯೋಜನವನ್ನು ಸರಕಾರದ ಆಶಯದಂತೆ ಅರ್ಹ ಫಲಾನುಭವಿಗಳಿಗೆ ತಲುಪಿಸಬೇಕು ಎಂದು ತಿಳಿಸಿದರು.

ಎಲ್ಲ ಉಪ ವಿಭಾಗಾಧಿಕಾರಿಗಳು, ತಹಶೀಲ್ದಾರರು ನ್ಯಾಯಾಲಯದ ಪ್ರಕರಣಗಳನ್ನು ತ್ವರಿತವಾಗಿ ವಿಲೇವಾರಿ ಮಾಡಬೇಕು ಎಂದು ನಿರ್ದೇಶನ ನೀಡಿದರು..

ಸಮಾಜಕಲ್ಯಾಣ, ಹಿಂದುಳಿದ ವರ್ಗಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳ ಸ್ಥಾಪನೆಗೆ ಅಗತ್ಯ ಭೂಮಿ ಮಂಜೂರಾತಿಗೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಮುತುವರ್ಜಿ ವಹಿಸಬೇಕು ಎಂದು ಹೇಳಿದರು.

ಇದಲ್ಲದೇ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಅನುಕೂಲವಾಗುವಂತೆ ಜಾಗೆಯನ್ನು ಮಂಜೂರು ಮಾಡಬೇಕು. ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಈ ನಿಟ್ಟಿನಲ್ಲಿ ಆಸಕ್ತಿ ವಹಿಸಬೇಕು.

ಎಸ್.ಸಿ.ಪಿ. ಹಾಗೂ ಟಿ.ಎಸ್.ಪಿ– ನಿಗದಿತ ಗುರಿ ಸಾಧನೆಗೆ ಸೂಚನೆ:

ಎಸ್.ಸಿ.ಪಿ. ಹಾಗೂ ಟಿ.ಎಸ್.ಪಿ. ಅನುದಾನ ಬಳಕೆಯ ಪ್ರಗತಿ ಅತ್ಯಂತ ಕಡಿಮೆ ಇರುವುದರಿಂದ ನಿಗದಿತ ಕಾಲಾವಧಿಯಲ್ಲಿ ಅನುದಾನವನ್ನು ಖರ್ಚು ಮಾಡಬೇಕು.

ನಿಗದಿತ ಗುರಿ ಸಾಧಿಸದೇ ಇರುವ ಇಲಾಖೆಯ ಅಧಿಕಾರಿಗಳನ್ನು ಹೊಣೆಯಾಗಿಸಿ ಕಾನೂನು ಕ್ರಮವನ್ನು ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಜಿಲ್ಲೆಯಲ್ಲಿ ಬೈಲಹೊಂಗಲ, ಬೆಳಗಾವಿ ನಗರ ಮತ್ತು ಖಾನಾಪುರ ತಾಲ್ಲೂಕಿನಲ್ಲಿ ಡೆಂಗಿ ಜ್ವರ ಪ್ರಕರಣಗಳು ಹೆಚ್ಚು ಕಂಡುಬಂದಿದ್ದು, ನಿಯಂತ್ರಣಕ್ಕೆ ಸೂಕ್ತ ಕ್ರಮ ವಹಿಸುವಂತೆ ತಿಳಿಸಿದರು.

ಬರ ನಿರ್ವಹಣೆಗೆ 22.50 ಕೋಟಿ ಅನುದಾನ:

ಬರ ನಿರ್ವಹಣೆಗೆ ರಾಜ್ಯ ಸರಕಾರ 22.50 ಕೋಟಿ ರೂಪಾಯಿ ಬಿಡುಗಡೆ ಮಾಡಿರುತ್ತದೆ.

ಈ ಅನುದಾನದಲ್ಲಿ ಹೊಸದಾಗಿ ಕೊಳವೆಬಾವಿ ಕೊರೆಯಲು ಅವಕಾಶವಿರುವುದಿಲ್ಲ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಜಿಲ್ಲೆಗೆ 17 ಸಾವಿರ ಮೇವಿನ ಕಿಟ್ ಗಳ ಗುರಿ ನೀಡಲಾಗಿದ್ದು, ಸದ್ಯಕ್ಕೆ 4 ಸಾವಿರ ಕಿಟ್‌ಗಳು ಬಂದಿರುತ್ತವೆ.

ಜಾನುವಾರುಗಳನ್ನು ಹೊಂದಿರುವ ಕೃಷಿಕರಿಗೆ ಮಾತ್ರ ಮೇವಿನ ಕಿಟ್ ವಿತರಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು. ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹರ್ಷಲ್ ಭೋಯರ್, ಅವರು ಜಿಲ್ಲೆಯಲ್ಲಿ ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿ ಕೊರತೆ ನೀಗಿಸಲು ಕ್ರಮ ಕೈಗೊಳ್ಳಲಾಗಿದೆ ಎಂದರು. ಮಹಾನಗರ ಪಾಲಿಕೆ ಆಯುಕ್ತರಾದ ಅಶೋಕ ದುಡಗುಂಟಿ, ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ನೀಗಿಸಲು ಹಳೆಯ ಕೊಳವೆಬಾವಿ ದುರಸ್ತಿ ಜತೆಗೆ ಹೊಸದಾಗಿ ಕೊಳವೆಬಾವಿ ಕೊರೆಸಲಾಗುವುದು ಎಂದು ಹೇಳಿದರು. ಹದಿನೈದು ತಾಲ್ಲೂಕುಗಳು ಬರಪೀಡಿತ ಎಂದು ಘೋಷಣೆಯಾಗಿದೆ. ಹಿಂಗಾರು ಹಂಗಾಮು ಅಕ್ಟೋಬರ್ ನಲ್ಲಿ ಶೇ. 78ರಷ್ಟು ಮಳೆ ಕೊರತೆಯಾಗಿದೆ. ಹಿಂಗಾರು ಬಿತ್ತನೆ ಕುಂಠಿತಗೊಂಡಿದ್ದು, ಕೇವಲ ಶೇ.38 ರಷ್ಟು ಬಿತ್ತನೆಯಾಗಿದೆ.

ಇತ್ತೀಚಿನ ಮಳೆಯಿಂದ ಹೊಸದಾಗಿ ಬಿತ್ತನೆಗೆ ಸಾಧ್ಯವಾಗುವುದಿಲ್ಲ. ಆದರೆ ಈಗಾಗಲೇ ಬಿತ್ತನೆಯಾಗಿರುವ ಬೆಳೆ ಚೇತರಿಕೆಯಾಗಲಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಶಿವನಗೌಡ ಪಾಟೀಲ ವಿವರಿಸಿದರು.

ಪ್ರೊಬೇಷನರಿ ಐ.ಎ.ಎಸ್. ಅಧಿಕಾರಿ ಶುಭಂ ಶುಕ್ಲಾ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಬಸವರಾಜ್ ಹೆಗ್ಗನಾಯಿಕ, ಉಪ ವಿಭಾಗಾಧಿಕಾರಿಗಳು, ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ"ದಡಿ ಅರ್ಜಿ ಅಹ್ವಾನ

ಬೆಳಗಾವಿ: ದೀನ್‌ದಯಾಳ್ ಅಂತ್ಯೋದಯ ಯೋಜನೆ 2023–24ನೇ ಸಾಲಿ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ"ದಡಿ ಸಾಮಾಜಿಕ ಕ್ರೋಢೀಕರಣ ಮತ್ತು ಸಾಂಸ್ಥಿಕ ಅಭಿವೃದ್ಧಿ ಉಪಘಟಕದಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿವುಳ್ಳವರು ಡಿ.06 2023 ರೊಳಗಾಗಿ ಅಗತ್ಯ ದಾಖಲಾತಿಗಳೊಂದಿಗೆ ಡೇ–ನಲ್ಮ್ ಶಾಖೆ, ಮಹಾನಗರ ಪಾಲಿಕೆ, ಬೆಳಗಾವಿ ಈ ಕಾರ್ಯಾಲಯಕ್ಕೆ ಭೇಟಿ ನೀಡಿ ಅರ್ಜಿಗಳನ್ನು ಭರ್ತಿ ಮಾಡಿ ಸಲ್ಲಿಸಬಹುದಾಗಿದೆ, ಅಪೂರ್ಣ ಅರ್ಜಿಗಳನ್ನು ತಿರಸ್ಕರಿಸಲಾಗುವದು.

ನಿಗದಿಪಡಿಸಿದ ಭೌತಿಕ ಗುರಿ 182 ಸ್ವ–ಸಹಾಯ ಗುಂಪುಗಳಿಗೆ ಒಂದು ಬಾರಿಗೆ ರೂ. 10 ಸಾವಿರ ಆವರ್ತಕ ನಿಧಿ ಸೌಲಭ್ಯ , 13 ಪ್ರದೇಶ ಮಟ್ಟದ ಒಕ್ಕೂಟ (ಮಹಾಸಂಘಕ್ಕೆ) ಒಂದು ಬಾರಿಗೆ ರೂ. 50,000–00 ಆವರ್ತಕ ನಿಧಿ ಸೌಲಭ್ಯ. ನಿಡಲಾಗುವುದು.

ಅರ್ಹತೆ

ಸ್ವ–ಸಹಾಯ ಗುಂಪಿನ ಸದಸ್ಯರಲ್ಲಿ ಶೇ.70 ರಷ್ಟು ಸದಸ್ಯರು ಕಡ್ಡಾಯವಾಗಿ ನಗರದ ಬಡವರಾಗಿರಬೇಕು, ಅಂದರೆ ವಾರ್ಷಿಕ ಆದಾಯ ರೂ.1,20,000 ಮಿತಿಯೊಳಗಿರಬೇಕು, ಪುರುಷ ದೈಹಿಕ ಅಂಗವಿಕಲರು ಮಾತ್ರ ಸ್ವ–ಸಹಾಯ ಗುಂಪುಗಳನ್ನು ರಚಿಸಲು ಅವಕಾಶವಿರುತ್ತದೆ.

ಸ್ವ–ಸಹಾಯ ಗುಂಪುಗಳಿಗೆ ಒಂದು ಬಾರಿ ರೂ. 10,000 ಆವರ್ತಕ ನಿಧಿ ಮೊತ್ತವನ್ನು ಪೈಸಾ ಪೋರ್ಟಲ್ ಮೂಲಕ ಜಮಾ ಮಾಡಲಾಗುತ್ತದೆ. (ಗುಂಪು ರಚನೆಯಾದ 03 ತಿಂಗಳ ನಂತರ), ಡೇ–ನಲ್ಮ್ ಅಭಿಯಾನದ ಸಾಮಾಜಿಕ ಕ್ರೋಢೀಕರಣ ಮತ್ತು ಸಾಂಸ್ಥಿಕ ಅಭಿವೃದ್ಧಿ ಉಪಘಟಕದಡಿ ನೀಡಲಾದ ನಿಯಮಗಳನ್ವಯ 10 ರಿಂದ 20 ಸ್ವ–ಸಹಾಯ ಗುಂಪುಗಳನ್ನು ಸೇರಿ 1 ಪ್ರದೇಶ ಮಟ್ಟದ ಒಕ್ಕೂಟ ಮಹಾಸಂಘವನ್ನು ರಚಿಸಬೇಕು.

ದಾಖಲೆಗಳು

ವಾರ್ಷಿಕ ಆದಾಯ ಪ್ರಮಾಣ ಪತ್ರ ಹಾಗೂ ಜಾತಿ ಪ್ರಮಾಣ ಪತ್ರ (ಬೆಳಗಾವಿ ತಹಶೀಲ್ದಾರರ ಕಛೇರಿಯಂದ ದೃಢೀಕೃತ ಪ್ರಮಾಣ ಪತ್ರ), ರಹವಾಸಿ ದಾಖಲೆಗಾಗಿ ರೇಷನ್ ಕಾರ್ಡ,ಆಧಾರ ಕಾರ್ಡ, ಚುನಾವಣೆ ಗುರುತಿನ ಚೀಟಿ ಸಲ್ಲಿಸುವುದು, ಗುಂಪಿನ ಅರ್ಜಿ ಹಾಗೂ 02 ಭಾವಚಿತ್ರಗಳು. ಸ್ವ–ಸಹಾಯ ಗುಂಪುಗಳನ್ನು ರಚಿಸಿ ಕನಿಷ್ಠ 03 ತಿಂಗಳ ಅವಧಿ ಪೂರ್ಣಗೊಂಡಿರಬೇಕು.

ಹೆಚ್ಚಿನ ಮಾಹಿತಿಗಾಗಿ ಡೇ–ನಲ್ಮ್ ಶಾಖೆ, ಬೆಳಗಾವಿ ಮಹಾನಗರ ಪಾಲಿಕೆ, ಇಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಬೆಳಗಾವಿ ಮಹಾನಗರ ಪಾಲಿಕೆ ಆಡಳಿತ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಲಂಚ ಪಡೆಯುವಾಗ ಲೋಕಾಯುಕ್ತ ಬಲೆಗೆ ಬಿದ್ದ ಕಂದಾಯ ನಿರೀಕ್ಷಕ

ಬೆಂಗಳೂರು: ಚೆಕ್ನಲ್ಲಿ 3.5 ಲಕ್ಷ ರೂ. ಲಂಚ ಪಡೆಯುತ್ತಿದ್ದ ವಸಂತ್ ದಾಸನಪುರದ ಕಂದಾಯ ನಿರೀಕ್ಷಕ ಮತ್ತು ಖಾಸಗಿ ಚಾಲಕನೊಬ್ಬನನ್ನು ಲೋಕಾಯುಕ್ತ ಅಧಿಕಾರಿಗಳು ಬಂಧಿಸಿದ್ದಾರೆ.

ಬಂಧಿತ ಅಧಿಕಾರಿಯನ್ನು ವಸಂತ್ ಎಂದು ಗುರುತಿಸಲಾಗಿದೆ. ಆತ ಈ ಮೊದಲೇ ಚೆಕ್ನಲ್ಲಿ 4 ಲಕ್ಷ ರೂ. ಹಣವನ್ನು ಚೆಕ್ನಲ್ಲಿ ಪಡೆದಿದ್ದ ಎಂದು ತಿಳಿದು ಬಂದಿದೆ.

ಬುಧವಾರ ಖಾಸಗಿ ಹೋಟೆಲ್ನಲ್ಲಿ 3.5 ಲಕ್ಷ ರೂ. ಪಡೆಯುತ್ತಿದ್ದ ವೇಳೆ ರೆಡ್ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾನೆ. ಖಾತೆ ಪೋಡಿ ಮಾಡಿ ಕೊಡಲು 28 ಲಕ್ಷ ರೂ. ಬೇಡಿಕೆ ಇಟ್ಟಿದ್ದ ಎಂದು ತಿಳಿದು ಬಂದಿದೆ.

ವಿಚಾರಣೆ ವೇಳೆ ಹಣವನ್ನು ಮನೆಯಲ್ಲಿ ಇಟ್ಟಿರುವುದಾಗಿ ವಸಂತ್ ಹೇಳಿದ್ದಾನೆ. ಲೋಕಾಯುಕ್ತ ಅಧಿಕಾರಿಗಳು ಆರ್‌ಐ ಮನೆಯಲ್ಲಿ ಶೋಧ ನಡೆಸಿದ ವೇಳೆ 9 ಲಕ್ಷ ರೂ. ಹಣ ಪತ್ತೆಯಾಗಿದೆ. ಆ ಹಣವನ್ನು ಲೋಕಾಯುಕ್ತ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

ಹುಕ್ಕೇರಿ: ಬ್ಯಾಂಕ್ ಸಭೆಯಲ್ಲಿ ಭಾಗಿಯಾಗಲು ಮನವಿ

ಹುಕ್ಕೇರಿ: ತಾಲೂಕಿನ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಜನರ ಬ್ಯಾಂಕಿನ ಸಮಸ್ಯೆಗಳಿಗೆ ಸಂಬಂಧಿಸಿದ ಕುಂದು ಕೊರತೆ ಸಭೆಯನ್ನು ಇದೇ ತಿಂಗಳು 16 ರಂದು ಬೆಳಗ್ಗೆ 11 ಗಂಟೆಗೆ ಇಲ್ಲಿನ ತಹಶೀಲ್ದಾರ್ ಕಾರ್ಯಾಲಯದಲ್ಲಿ ಆಯೋಜಿಸಲಾಗಿದೆ.

ಕಾರಣ ಬ್ಯಾಂಕ್ ವ್ಯವಸ್ಥಾಪಕರು, ಪ. ಜಾ /ಪ. ವರ್ಗದ ಮುಖಂಡರು ಸಭೆಗೆ ಹಾಜರಾಗುವಂತೆ ತಾಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಎಚ್.ಎ. ಮಾಹುತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶಾಲಾ ಮಕ್ಕಳಿಗೆ ದಂತ ತಪಾಸಣಾ ಶಿಬಿರ

ಬೆಳಗಾವಿ: ಇತ್ತಿಚೆಗೆ ಜೆಠೊ ಲೇಡಿಜ ವಿಂಗ ಅವೃ ಆಶ್ರಯದಲ್ಲಿ ಹಾಗೂ ಕೆಎಲ್ಇ ವಿಶ್ವನಾಥ ಕತ್ತಿ ದಂತ ವಿಜ್ಞಾನ ಮಹಾವಿದ್ಯಾಲಯದ ಸಹಯೋಗದಲ್ಲಿ ಬೆಳಗಾವಿಯ ಸದಾಶಿವ ನಗರದಲ್ಲಿರುವ ಸರಕಾರಿ ಕನ್ನಡ ಪ್ರಾಥಮಿಕ ಶಾಲೆ ನಂ 26 ದಲ್ಲಿನ ಎಲ್ಲ ವಿದ್ಯಾರ್ಥಿಗಳ ದಂತ ತಪಾಸಣೆ ಶಿಬಿರವನ್ನು ಆಯೋಜಿಸಲಾಗಿತ್ತು.

ಈ ಶಿಬಿರದ ಸಂಯೋಜಕಿಯಾದ ಡಾ. ಅಂಜನಾ ಬಾಗೇವಾಡಿ ಅವರು ಮಕ್ಕಳನ್ನು ಉದ್ದೇಶಿಸಿ ಮಾತನಾಡಿ, ಮಕ್ಕಳು ಬಾಲ್ಯದಿಂದಲೆ ತಮ್ಮ ಹಲ್ಲುಗಳನ್ನು ಸ್ವಚ್ಛವಾಗಿಇಟ್ಟುಕೊಳ್ಳಬೇಕು.

ದಿನಕ್ಕೆ ಎರಡು ಬಾರಿ ಬ್ರಷ್ ಮಾಡಬೇಕು. ಹಲ್ಲುಗಳಲ್ಲಿ

ನೋವು ಕಂಡು ಬಂದಲ್ಲಿ ತತ್‌ಕ್ಷಣ ವೈದ್ಯರನ್ನು ಕಂಡು ಪರಿಹಾರ ಕಂಡುಕೊಳ್ಳಬೇಕೆಂದು ಅವರು ಸಲಹೆ ನೀಡಿದರು.

ಸದಾಶಿವ ನಗರದಲ್ಲಿ ಈ ಸರಖಾರಿ ಶಾಲೆಯನ್ನು ಜೆಠೋ ಲೇಡಿಜ ವಿಂಗ ದತ್ತು ಪಡೆದುಕೊಂಡಿದ್ದು, ಈ ಶಿಬಿರದಲ್ಲಿ ಸುಮಾರು 300 ಕ್ಕೂ ಹೆಚ್ಚು ವಿದ್ಯಾರ್ಥಿ– ವಿದ್ಯಾರ್ಥಿನಿಯರ ದಂತ ತಪಾಸಣೆ ನಡೆಸಲಾಯಿತು.

ಹಲ್ಲುಗಳಿಗೆ ಸಂಬಂಧಿಸಿದಂತೆ ಯಾವುದಾದರು ಕಾಯಿಲೆಗಳಿದ್ದರೆ ಅವುಗಳ ಮೇಲೆ ಉಚಿತ ಚಿಕಿತ್ಸೆ ನೀಡಲಾಗುವುದೆಂದು ಈ ಸಂದರ್ಭದಲ್ಲಿ ತಿಳಿಸಿ ಎಲ್ಲ ವಿದ್ಯಾರ್ಥಿಗಳಿಗೆ ಟೂಥಪೇಸ್ಟ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜೆಠೋ ಲೇಡಿಜ ವಿಂಗ ಅಧ್ಯಕ್ಷೆ ಮಾಯಾ ಜೈನ, ಪ್ರಧಾನ ಕಾರ್ಯದರ್ಶಿ ಮಮತಾ ಜೈನ, ಸುನಿತಾ ಸಂಚೇತಿ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

ವಿಶ್ವ ಪಾರ್ಶ್ವವಾಯು ದಿನಾಚರಣೆ

ಬೆಳಗಾವಿ: ಇತ್ತೀಚೆಗೆ ಕೆ.ಎಲ್.ಇ.ಎಸ್ ಇನ್‌ಸ್ಟಿಟ್ಯೂಟ್ ಆಫ್ ಫಿಸಿಯೋಥೆರಪಿ, ನ್ಯೂರೋ ಫಿಸಿಯೋಥೆರಪಿ ವಿಭಾಗವು ಡಾ.ಎಂ.ಎಸ್.ಶೇಷಗಿರಿ ಕಾಲೇಜ್ ಆಫ್ ಇಂಜನೀಯರಿಂಗ್ ಟೆಕ್ನಾಲಜಿ, ಬೆಳಗಾವಿ ಸಭಾಭವನದಲ್ಲಿ "ಪಾರ್ಶ್ವವಾಯು ಜಾಗೃತಿ" ಕಾರ್ಯಕ್ರಮವನ್ನು ಹಮ್ಮಿಕೊಂಡಿತ್ತು.

ಡಾ.ಎಂ.ಎಸ್.ಶೇಷಗಿರಿ ಇಂಜನೀಯರಿಂಗ್ ಮತ್ತು ತಂತ್ರಜ್ಞಾನ ಮಹಾವಿಧ್ಯಾಲಯದ ಪ್ರಾಂಶುಪಾಲರಾದ ಡಾ.ಸುಭಾಸ್ ಎಫ್.ಪಾಟೀಲ ಅವರು "ಪಾರ್ಶ್ವವಾಯು ಜಾಗೃತಿ" ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಇತ್ತೀಚೆಗೆ ಈ ರೋಗವು ಸಾಮಾನ್ಯವಾಗಿದ್ದು ಅಶಿಸ್ಥಿನ ಜೀವನಶೈಲಿಯಿಂದ ಬರುತ್ತಿದ್ದು, ಪಾರ್ಶ್ವವಾಯು ತಡೆಗಟ್ಟಲು ಯುವ ಜನರು ತಮ್ಮ ಜೀವನಶೈಲಿಯನ್ನು ಬದಲಾಯಿಸಿಕೊಳ್ಳುವುದು ಅವಶ್ಯವಾಗಿದೆ. ಅದರ ಅಪಾಯಕಾರಿ ಅಂಶಗಳ ಕುರಿತು ಪಾರ್ಶ್ವವಾಯು ಹಾಗೂ ಅದರ ಪರಿಣಾಮಗಳ ಕುರಿತಾಗಿ "ಪಾರ್ಶ್ವವಾಯು ಜಾಗೃತಿ" ಕಾರ್ಯಕ್ರಮದಲ್ಲಿ ಡಾ.ಜೆಭಾ ಚೈತ್ರಾ, ಡಾ.ರಾಘವೇಂದ್ರ ಧಾರವಾಡಕರ ಅವರ ನೇತ್ರತ್ವದಲ್ಲಿ

ನ್ಯೂರೋ ಫಿಸಿಯೋಥೆರಪಿ ವಿಭಾಗದ ಎಲ್ಲಾ ಸ್ನಾತಕೋತ್ತರ ವಿಧ್ಯಾರ್ಥಿಗಳು ಅಧ್ಯಾಪಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ನಾಟಕ ಮತ್ತು ಉಪನ್ಯಾಸಗಳನ್ನು ಹಮ್ಮಿಕೊಳ್ಳುವ ಮೂಲಕ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲಾಯಿತು.